ಸಂಪುಟ : 10 ಸಂಚಿಕೆ: 38 ಪುಟ : 4+2 ಬೆಲೆ: 3.00 ರವಿವಾರ ಮಾರ್ಚ್ 9 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 38 Pages : 4+2 Price : 3.00 Sunday March 9 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಇಂಡಿಯಾ Vs ನ್ಯೂಜಿಲೆಂಡ್ ಫೈನಲ್ ಫೈಟ್: 2ನೇ ಬಾರಿ ಚಾಂಪಿಯನ್ಸ್ ಆಗ್ತಾರಾ ಟೀಮ್ ಇಂಡಿಯಾ!

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದುಬೈನ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ಇಂಡಿಯಾ ಮತ್ತು ನ್ಯೂಜಿಲೆಂಡ್ ತಂಡಗಳ ಚಾಂಪಿಯನ್ ಟ್ರೋಫಿಯ ಅಂತಿಮ ಪಂದ್ಯ ನಡೆಯಲಿದೆ.

ಟೂರ್ನಿಯಲ್ಲಿ ಆಡಿರುವ ನಾಲ್ಕು ಪಂದ್ಯಗಳಲ್ಲಿ ಗೆಲುವು ಸಾಧಿಸಿ ಅಜೇಯವಾಗಿ ಫೈನಲ್‌ಗೆ ಲಗ್ಗೆ ಇಟ್ಟಿರುವ ಭಾರತ ತಂಡ ಫೈನಲ್‌ನಲ್ಲೂ ಗೆದ್ದು ಪ್ರಶಸ್ತಿ ಮುಡಿಗೇರಿಸಿ ಕೊಳ್ಳಬೇಕು ಎಂಬ ದೃಢಸಂಕಲ್ಪ ತೊಟ್ಟಿದೆ. ಮತ್ತೊಂದೆಡೆ ದಕ್ಷಿಣ ಆಫ್ರಿಕಾ ವಿರುದ್ಧ ಭರ್ಜರಿ ಜಯ ಸಾಧಿಸಿ ಫೈನಲ್‌ಗೆ ಲಗ್ಗೆ ಇಟ್ಟಿರುವ ಕಿವೀಸ್ ತಂಡ, ಚಾಂಪಿಯನ್ಸ್ ಟ್ರೋಫಿಯ ಮೇಲೆ ಕಣ್ಣಿಟ್ಟಿದೆ.

## ಭರವಸೆಯ ಬೆಳಕಾದ ಬಜೆಟ್

■ ವಿಜಯಸಾಕ್ಷಿ ಸುದ್ದಿ, ಗದಗ



ಸಿಎಂ ಸಿದ್ದರಾಮಯ್ಯನವರು ಸದನದಲ್ಲಿ ಮಂಡಿಸಿದ ಬಜೆಟ್ ಭರವಸೆಯ ಬೆಳಕನ್ನು ಚೆಲ್ಲಿದೆ ಎಂದು ಗದಗ-ಬೆಟಗೇರಿ ನಗರಸಭೆಯ ಸದಸ್ಯ ಜನಾಬ್ ಬರಕತ್ ಅಲಿ ಮುಲ್ಲಾ ಸಂತಸ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಜೆಟ್‌ನಲ್ಲಿ ಉತ್ತರ ಕರ್ನಾಟಕ ಅಭಿವೃದ್ಧಿಗೆ ಹೆಚ್ಚಿನ ಮಾನ್ಯತೆ ನೀಡಿದ್ದು, ಸವದತ್ತಿ ಯಲ್ಲಮ್ಮ ದೇವಸ್ಥಾನದ ಅಭಿವೃದ್ಧಿಗಾಗಿ 250 ಕೋಟಿ ಅನುದಾನ, ಜಿಲ್ಲೆಯ ಡಂಬಳ ಗ್ರಾಮದಲ್ಲಿ ತೋಟಗಾರಿಕೆ ಮಹಾವಿದ್ಯಾಲಯದ ಪ್ರಸ್ತಾಪ, ಐತಿಹಾಸಿಕ ಲಕ್ಕುಂಡಿಯನ್ನು ವಿಶ್ವ ಪಾರಂಪರಿಕ ಪಟ್ಟಿಗೆ ಸೇರ್ಪಡೆಗೊಳಿಸಿ 250 ಕೋಟಿ ವಿಶೇಷ ಅನುದಾನ, ಮಹಿಳೆಯರ ಉನ್ನತಿಗಾಗಿ ಧನ ಸಹಾಯ, ಬಾಗಲಕೋಟೆಯಲ್ಲಿ ರಾಜೀವ್ ಗಾಂಧಿ ವಿ.ವಿ ಸ್ಥಾಪನೆ, 500 ಪಬ್ಲಿಕ್ ಶಾಲೆಗಳ ಸ್ಥಾಪನೆ, 2 ಸಾವಿರ ಉಪನ್ಯಾಸಕರ ನೇಮಕಾತಿಗೆ ಘೋಷಣೆ ಮುಂತಾದವರು ಜನಪರ ಯೋಜನೆಗಳಾಗಿವೆ ಎಂದಿದ್ದಾರೆ.

## ಸರ್ವರಿಗೂ ಸಮಪಾಲಿನ ಬಜೆಟ್

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಶುಕ್ರವಾರ 4 ಲಕ್ಷ ಕೋಟಿ ರೂಗಳ ಬೃಹತ್ ಬಜೆಟ್ ಮಂಡಿಸಿದ್ದಾರೆ. ಇದು ಸರ್ವರಿಗೂ ಸಮಪಾಲಿನ ಅಭಿವೃದ್ಧಿ ಬಜೆಟ್ ಆಗಿದೆ. ಆರ್ಥಿಕವಾಗಿ, ಶೈಕ್ಷಣಿಕವಾಗಿ, ಸಾಮಾಜಿಕವಾಗಿ, ರೈತರ ಪರವಾಗಿ, ಬಡವರ ಪರವಾಗಿ ಉದ್ಯೋಗದಾತರಿಗೆ ಮತ್ತು ಕೈಗಾರಿಕಾಕ್ರಾಂತಿ ತರುವಲ್ಲಿ ಈ ಬಜೆಟ್ ಅತ್ಯಂತ ಪರಿಣಾಮಕಾರಿಯಾಗಿದೆ ಎಂದು ಕಾಂಗ್ರೆಸ್ ಮುಖಂಡ ಎಲ್.ಆರ್. ಕಿತ್ತೂರ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಳ್ಳಿಯಿಂದ ಬೆಂಗಳೂರಿನವರಿಗೆ ಅಭಿವೃದ್ಧಿಪಡಿಸಲು ಎಲ್ಲಾ ತರಹದ ಆರ್ಥಿಕ ಅನುದಾನ ನೀಡಲಾಗಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣಕ್ಕಾಗಿ ಆರ್ಥಿಕ ನೆರವು ನೀಡಲಾಗಿದೆ. ಒಟ್ಟಾರೆಯಾಗಿ ಇದು ಗ್ಯಾರಂಟಿ ಬಜೆಟ್ ಆಗಿದೆ ಎಂದಿದ್ದಾರೆ.

### ಜನವಿರೋಧಿ ಬಜೆಟ್ । ಗದಗ ಜಿಲ್ಲಾ ಬಿಜೆಪಿ ಆರೋಪ । ಗಾಂಧಿ ಸರ್ಕಲ್‌ನಲ್ಲಿ ಪ್ರತಿಭಟನೆ, ಮನವಿ ಸಲ್ಲಿಕೆ

# ಕಾಂಗ್ರೆಸ್ ಸರ್ಕಾರದಿಂದ ಜನತೆಗೆ ಅನ್ಯಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಹಣಕಾಸು ಖಾತೆಯ ಜವಾಬ್ದಾರಿ ಹೊತ್ತ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿರುವ ರಾಜ್ಯದ 2025-26ರ ಸಾಲಿನ ಬಜೆಟ್ ಅಲ್ಪಸಂಖ್ಯಾತರ ಹೆಸರಿನಲ್ಲಿ ಮುಸ್ಲಿಂ ಸಮುದಾಯವನ್ನು ಓಲೈಸಲು ಒತ್ತು ನೀಡಿದ್ದು, ಬಿಜೆಪಿ ಈ ಬಜೆಟ್‌ನ್ನು ಖಂಡಿಸುತ್ತದೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಹೇಳಿದರು.

ಸಿಎಂ ಸಿದ್ದರಾಮಯ್ಯ ಶುಕ್ರವಾರ ಮಂಡಿಸಿದ ಬಜೆಟ್ ಜನವಿರೋಧಿಯಾಗಿದೆ ಎಂದು ಆರೋಪಿಸಿ ಜಿಲ್ಲಾ ಬಿಜೆಪಿ ವತಿಯಿಂದ ನಗರದ ಗಾಂಧಿ ಸರ್ಕಲ್‌ನಲ್ಲಿ ಮಾನವ ಸರಪಳಿ ನಿರ್ಮಿಸಿ, ಬೃಹತ್ ಪ್ರತಿಭಟನೆ ನಡೆಸಿ ಮನವಿ ಸಲ್ಲಿಕೆಯ ಸಂದರ್ಭದಲ್ಲಿ ಅವರು ಮಾತನಾಡಿ, ಇದು ಜನತೆಯ ನಿರೀಕ್ಷೆಯನ್ನು ಹುಸಿಗೊಳಿಸಿದೆ. ನಿಖರ ಭರವಸೆ ನೀಡುವ ಯೋಜನೆ ಹಾಗೂ ಅದಕ್ಕೆ ಅನುದಾನ ಪ್ರಕಟಿಸದೆ ಆಕರ್ಷಕ ಕಾರ್ಯಕ್ರಮಗಳನ್ನು ಘೋಷಿಸಿ ಜನರ ಮೂಗಿಗೆ ತುಪ್ಪ ಸವರಲು ಹೊರಟಿದ್ದಾರೆ. ಶಿಕ್ಷಣ ಕ್ಷೇತ್ರದ ಸಮಗ್ರ ಅಭಿವೃದ್ಧಿ ಬಗ್ಗೆ ಯಾವುದೇ ಕೊಡುಗೆ ನೀಡಿಲ್ಲ. ಉದ್ಯೋಗ ಸೃಷ್ಟಿಗೆ ಅವಕಾಶವಿರುವ ಕೈಗಾರಿಕೆಗಳಿಗೆ ಉತ್ತೇಜನವೇ ಇಲ್ಲ ಎಂದು ಆಕ್ಷೇಪಿಸಿದರು.

ಸರ್ಕಾರಿ ಶಾಲೆಗಳ ಕಟ್ಟಡಗಳ ವಿಸ್ತರಣೆ ಹಾಗು ನವೀಕರಣಕ್ಕೆ ಬಜೆಟ್‌ನಲ್ಲಿ ಯಾವುದೇ ಹಣ ನೀಡದೇ,



ಕೇವಲ 5 ಸಾವಿರ ಪೂರ್ವ ಪ್ರಾಥಮಿಕ ತರಗತಿಗಳನ್ನು ಆರಂಭಿಸುವುದಾಗಿ ಘೋಷಿಸಿದ್ದಾರೆ. ಗುಣಮಟ್ಟದ ಶಿಕ್ಷಣ ಹಾಗೂ ಮೂಲಸೌಕರ್ಯದತ್ತ ದೃಷ್ಟಿ ಹರಿಸದೆ ಕೈ ತೊಳೆದುಕೊಳ್ಳಲಾಗಿದೆ. 9 ವಿಶ್ವವಿದ್ಯಾಲಯಗಳನ್ನು ಮುಚ್ಚುವ ನಿರ್ಧಾರ ಖಂಡನಾರ್ಹ ಎಂದು ತಿಳಿಸಿದರು.

ಜಗನ್ನಾಥಸಾ ಭಾಂಡಗೆ, ರಾಘವೇಂದ್ರ ಯಳವತ್ತಿ, ಉಷಾ ದಾಸರ, ಚಂದ್ರು ತಡಸದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮುಂತಾದ ಮುಖಂಡರು ಸಂದರ್ಭೋಚಿತವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಪಕ್ಷದ ಪ್ರಮುಖರಾದ ವಿಜಯಕುಮಾರ ಗಡ್ಡಿ, ಭದ್ರೇಶ ಕುಸ್ಲಾಪೂರ, ಅಶೋಕ ಸಂಕಣ್ಣವರ, ಬೂದಪ್ಪ ಹಳ್ಳಿ, ಅನಿಲ ಅಬ್ಬಿಗೇರಿ, ಭೀಮಸಿಂಗ ರಾಠೋಡ, ವಿನಾಯಕ ಮಾನ್ವಿ, ನಾಗರಾಜ ಕುಲಕರ್ಣಿ, ಬಿ.ಎಸ್. ಚಿಂಚಲಿ, ಸುಧೀರ ಕಾಟಿಗರ, ಸಂತೋಷ ಅಕ್ಕಿ, ರಮೇಶ ಸಜ್ಜಗಾರ, ಶಿವು ಹಿರೇಮನಿಪಾಟೀಲ, ನಾಗರಾಜ ತಳವಾರ, ನವೀನ ಕೊಟೆಕಲ್, ಮಹಾದೇವಪ್ಪ ಹಡಪದ, ಮುತ್ತಪ್ಪ ಮೂಲಿಮನಿ, ಅಪ್ಪಣ್ಣ ಟೆಂಗಿನಕಾಯಿ, ಲಕ್ಷ್ಮಣ ದೊಡ್ಮನಿ, ಮುತ್ತಣ್ಣ ಮುಶಿಗೇರಿ, ಶಂಕರ ಕಾಕಿ, ರವಿ ವಗ್ಗನವರ, ಬಸವರಾಜ ಚವ್ಹಾಣ, ಅವಿನಾಶ ಹೊನಗುಡಿ, ಅಪ್ಪು ನಸಸ್ತೆಮಠ, ಅಪ್ಪಣ್ಣ ಟೆಂಗಿನಕಾಯಿ, ಪಂಚಾಕ್ಷರಿ ಹರ್ಲಾಪೂರಮಠ, ಭಗನ ರಾಜಪುರೋಹಿತ, ಸಿದ್ರಾಮೇಶ ಹಿರೇಮಠ, ಮಾಂತೇಶ ಕಾತರಗಿ, ವಿಜಯಲಕ್ಷ್ಮೀ ದಿಂಡೂರ, ಲಕ್ಷ್ಮೀ ಕಾಕಿ, ಕಮಲಾಕ್ಷಿ ಗೊಂದಿ, ಮಂಜುನಾಥ ಶಾಂತಗೇರಿ, ರಮೇಶ ವಕ್ಕಾರ, ಬಸವರಾಜ ನರೆಗಲ್, ವಿನಾಯಕ ಹೊರಕೇರಿ, ಧರ್ಮರಾಜ ಕೊಂಚಿಗೇರಿ, ಕಾಳು ತೊಟದ, ಮಹೇಶ ದಾಸರ, ಕಿರಣ ಕಾಲಾಲ, ಆನಂದ ಗೌಳಿ, ಕಿರಣ ದಾಟನಾಳ, ಪ್ರಕಾಶ ಕೊತಂಬರಿ, ನಿಂಗಪ್ಪ ಬೂಶಿಯವರ, ಮಾಂತೇಶ ಕಾತರಗಿ, ವಿನೋದ ಹಂಸನೂರ ಸೇರಿದಂತೆ ಪಕ್ಷದ ಪ್ರಮುಖರು, ಮುಖಂಡರು ಉಪಸ್ಥಿತರಿದ್ದರು.

ಕುಲಕಸುಬು ಆಧಾರಿತ ಸಮುದಾಯಗಳನ್ನು ಉತ್ತೇಜಿಸಲು ಯಾವುದೇ ಕಾರ್ಯಕ್ರಮಗಳನ್ನು ಕೊಡದೇ ಕೇವಲ ಅಧಿಕಾರಕ್ಕೆ ಬರಲು ಮಾತ್ರ ದಲಿತ, ಹಿಂದುಳಿದವರ ಜಪ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ. ಅಬಿವೃದ್ಧಿಯಲ್ಲಿ ಹಿಂದುಳಿದ ಸಮುದಾಯಗಳ ಕಷ್ಟದ ತಾಪವನ್ನು ಕಡಿಮೆ ಮಾಡುವ ಯಾವುದೇ ಯೋಜನೆ ಪ್ರಕಟಿಸದೇ ಒಬಿಸಿ ಸಮುದಾಯಗಳ ಹಿತಾಸಕ್ತಿಯನ್ನು ಪೂರ್ಣ ಕಡೆಗಣಿಸಲಾಗಿದೆ. ಬಜೆಟ್‌ನಲ್ಲಿ ಘೋಷಿಸಿರುವ ಯೋಜನೆಗಳು ಕೇವಲ ಕಾಗದದಲ್ಲೇ ಉಳಿಯುವ ಸಾಧ್ಯತೆ ಗೋಚರವಾಗುತ್ತಿದೆ. ಕಳೆದ ಬಜೆಟ್‌ನಲ್ಲಿ ಘೋಷಣೆಯಾಗಿದ್ದ ಎಲ್ಲವೂ ಘೋಷಣೆಯಾಗಿಯೇ ಉಳಿದಿದೆ. ಈ ಬಜೆಟ್‌ಗೂ ಅದೇ ಗತಿ ಆಗುವ ಸಾಧ್ಯತೆಯೇ ಹೆಚ್ಚು ಎಂದು ಪ್ರತಿಭಟನಾಕಾರರು ಆರೋಪಿಸಿದರು.

### ಜೋಡು ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಎರಡು ಕೋಟಿ ರೂಪಾಯಿಗಳ ಅನುದಾನದಲ್ಲಿ ನಿರ್ಮಾಣವಾಗುತ್ತಿರುವ ನರೇಗಲ್ಲ ಬಸ್‌ನಿಲ್ದಾಣ-ಶ್ರೀ ಅನ್ನದಾನೇಶ್ವರ ಕಾಲೇಜಿನ ಜೋಡು ರಸ್ತೆ ಗುಣಮಟ್ಟದಿಂದ ಕೂಡಿರಬೇಕು. ಗುತ್ತಿಗೆದಾರರು ನಿಗದಿತ ಅವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ರೈತ ಸಂಪರ್ಕ ಕೇಂದ್ರದ ಬಳಿ ಉದ್ದೇಶಿತ ಜೋಡು ರಸ್ತೆಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಜೋಡು ರಸ್ತೆಯೊಂದಿಗೆ ಇದಕ್ಕೆ ವಿದ್ಯುತ್ ದೀಪಗಳನ್ನೂ ಅಳವಡಿಸಿ ಎರಡನ್ನೂ ಸೇರಿಸಿ ಒಮ್ಮೆಗೆ ಉದ್ಘಾಟನೆ ಮಾಡುವ ಯೋಜನೆ ಇದೆ. ಪಟ್ಟಣದ ಅಭಿವೃದ್ಧಿಯ ವಿಚಾರದಿಂದ ಪ.ಪಂ ಸದಸ್ಯರು ನಮ್ಮೊಂದಿಗೆ ಕೈ ಜೋಡಿಸಿದ್ದು, ಅಭಿವೃದ್ಧಿಯ ಪರ್ವಕ್ಕೆ ಕಾರಣವಾಗುತ್ತಿದೆ ಎಂದು ಹೇಳಿದರು.

ತಾಲೂಕಿನಲ್ಲಿರುವ ಕೆರೆಗಳಿಗೆ ನೀರು ತುಂಬಿಸುವ ಕಾರ್ಯಕ್ಕೆ ಈಗಾಗಲೇ ಒಪ್ಪಿಗೆ ದೊರೆತಿದ್ದು, 42 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಈ ಕಾಮಗಾರಿನ್ನು ಶೀಘ್ರದಲ್ಲಿಯೆ ಕೈಗೆತ್ತಿಕೊಳ್ಳಲಾಗುತ್ತಿದೆ. ಇದರಿಂದ ರೈತಾಪಿ ಜನರಿಗೆ, ಸಾರ್ವಜನಿಕರಿಗೆ ಅನುಕೂಲವಾಗಲಿದೆ. ನರೇಗಲ್ಲ ಶೈಕ್ಷಣಿಕ ಕ್ಷೇತ್ರ. ಇದಕ್ಕೆ ಬೇಕಾದ ಎಲ್ಲ ಸೌಲಭ್ಯಗಳನ್ನೂ



ಒದಗಿಸಿಕೊಡಲು ತಾವು ಸಿದ್ಧ ಎಂದರು.

ಈ ಸಾರೆ ತಾಲೂಕಿನಲ್ಲಿ 1000 ಕೃಷಿ ಹೊಂಡಗಳನ್ನು ನಿರ್ಮಿಸುವ ಉದ್ದೇಶ ಹೊಂದಲಾಗಿದೆ. ಗ್ರಾಮೀಣ ರಸ್ತೆಗಳ ಸುಧಾರಣೆಯನ್ನು ಅಭಿವೃದ್ಧಿ ಪಥ ಯೋಜನೆಯಲ್ಲಿ ಕೈಗೆತ್ತಿಕೊಂಡು 50 ಕಿ.ಮೀ. ರಸ್ತೆ ಅಭಿವೃದ್ಧಿಪಡಿಸಲಾಗುವುದು. ನರೇಗಲ್ಲ-ತೊಂಡಿಹಾಳ ರಸ್ತೆಯನ್ನು ಸಹ ಇದೇ ಯೋಜನೆಯಡಿಯಲ್ಲಿ ಅಭಿವೃದ್ಧಿಪಡಿಸಲಾಗುವುದು. ನಗರೋತ್ಥಾನ ಯೋಜನೆ ಅಡಿಯಲ್ಲಿ ನರೇಗಲ್ಲ ಪಟ್ಟಣಕ್ಕೆ 10 ಕೋಟಿ ರೂಪಾಯಿಗಳ ಅನುದಾನ ಬಿಡುಗಡೆಯಾಗುತ್ತಿದ್ದು, ಪಟ್ಟಣ ಅಭಿವೃದ್ಧಿ ಪಥದಲ್ಲಿ ಸಾಗಲಿದೆ. ತಾಲೂಕಾ ಸ್ಥಳ ಗಜೇಂದ್ರಗಡದಲ್ಲಿ ನ್ಯಾಯಾಲಯ ಕಟ್ಟಡಕ್ಕಾಗಿ 10 ಕೋಟಿ ರೂ, ತಾಲೂಕು ಕಚೇರಿಗಾಗಿ, ಕ್ರೀಡಾಂಗಣಕ್ಕಾಗಿ ಶೀಘ್ರವೇ ಅನುದಾನ ಬಿಡುಗಡೆಯಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಶಾಸಕರು ಕೋಚಲಾಪುರದ ಬಳಿಯಲ್ಲಿನ ಭೂಮಿಯಲ್ಲಿ ರೈತ ಸಂಪರ್ಕ ಕೇಂದ್ರದ ಗೋದಾಮು ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಸಮಿತಿ ಅಧ್ಯಕ್ಷ ಮುತ್ತಪ್ಪ ನೂಲ್ಕಿ, ಪ.ಪಂ ಸದಸ್ಯರು, ಶಹರ ಘಟಕದ ಅಧ್ಯಕ್ಷ ಶಿವನಗೌಡ ಪಾಟೀಲ, ಡಾ. ಕೆ.ಬಿ. ಧನ್ನೂರ, ವಿ.ಆರ್. ಗುಡಿಸಾಗರ, ಡಾ. ಆರ್.ಬಿ. ಬಸವರಡ್ಡೇರ, ಶರಣಪ್ಪ ಬೆಟಗೇರಿ, ವಿ.ಬಿ. ಸೋಮಕಟ್ಟಿಮಠ, ಯೂಸೂಫ್ ಇಟಗಿ, ಬಸವರಾಜ ಗಾಣಿಗೇರ, ಹನಮಂತ ಅಬ್ಬಿಗೇರಿ, ಮೈಲಾರಪ್ಪ ಚಳ್ಳಮರದ, ಅಲ್ಲಾಬಕ್ಷಿ ನದಾಫ್, ಶೇಖಪ್ಪ ಜುಟ್ಟಲ, ಎಇಇ ಬಲವಂತಪ್ಪ ನಾಯಕರ, ಕೃಷಿ ಅಧಿಕಾರಿ ರವೀಂದ್ರಗೌಡ ಪಾಟೀಲ, ನಿಂಗನಗೌಡ ಲಕ್ಕನಗೌಡ್ರ, ಎ.ಸಿ. ಪಾಟೀಲ ಮತ್ತಿತರರಿದ್ದರು. ಎಂ.ಎಸ್. ದಢೇಸೂರಮಠ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಮುಖ್ಯಾಧಿಕಾರಿ ನಿಡಶೇಶಿ ವಂದಿಸಿದರು.

> ಈಗ ನಡೆದಿರುವ ಅಧಿವೇಶನ ಮುಗಿದ ತಕ್ಷಣವೆ ಅರ್ಹ ಬಡ ಫಲಾನುಭವಿಗಳಿಗೆ ನಿವೇಶನ ಹಂಚುವ ಕಾರ್ಯಕ್ಕೆ ಚಾಲನೆ ನೀಡಲಾಗುತ್ತಿದೆ. ತಾಲೂಕಿನ ರೋಣ, ಗಜೇಂದ್ರಗಡ ಮತ್ತು ನರೇಗಲ್ಲದಲ್ಲಿ ಸಿದ್ಧವಾಗಿರುವ ಇಂದಿರಾ ಕ್ಯಾಂಟೀನ್‌ಗಳನ್ನು ಶೀಘ್ರವೇ ಪ್ರಾರಂಭಗೊಳಿಸಲಾಗುವದು. ಅಲ್ಲದೆ, ಪಟ್ಟಣದ ಸರಕಾರಿ ಆಸ್ಪತ್ರೆಗೆ ಆಂಬುಲೆನ್ಸ್ ಒದಗಿಸಿಕೊಡಲು ಪ್ರಯತ್ನಿಸಲಾಗುವುದು.
>
> **- ಜಿ.ಎಸ್. ಪಾಟೀಲ. ಶಾಸಕರು, ರೋಣ.**

### ಸೈಬರ್ ಕಾನೂನು, ಭ್ರಷ್ಟಾಚಾರ ತಡೆಗಟ್ಟುವಿಕೆ ಕಾರ್ಯಕ್ರಮದಲ್ಲಿ ವಿಜಯ ಬಿರಾದಾರ ಉಪನ್ಯಾಸ

## ಸೋಶಿಯಲ್ ಮೀಡಿಯಾ ವಿದ್ಯಾರ್ಥಿ ಜೀವನಕ್ಕೆ ಅನಗತ್ಯ




■ ವಿಜಯಸಾಕ್ಷಿ ಸುದ್ದಿ, ಗದಗ

ಸೈಬರ್ ವಂಚನೆಯ ಬಲೆಗೆ ಒಳಗಾಗುವಂತೆ ಮಾಡುವ ಫೇಸ್‌ಬುಕ್, ವಾಟ್ಸಪ್, ಇನ್ಸ್ಟಾಗ್ರಾಮ್‌ನಂತಹ ಹಲವಾರು ಸಾಮಾಜಿಕ ಜಾಲತಾಣಗಳು ವಿದ್ಯಾರ್ಥಿ ಜೀವನಕ್ಕೆ, ಮಹಿಳೆಯರಿಗೆ ಅವಶ್ಯಕತೆ ಇಲ್ಲ. ಇಂತಹ ವ್ಯವಸ್ಥೆಯಿಂದ ಹೊರಬಂದು ಉತ್ತಮ ಅಭ್ಯಾಸದ ಮೂಲಕ ಒಂದು ಒಳ್ಳೆಯ ಸಾಧನೆ ಮಾಡಬಹುದು ಎಂದು ಗದಗ ಲೋಕಾಯುಕ್ತ ಡಿವೈಎಸ್‌ಪಿ ವಿಜಯ ಬಿರಾದಾರ ಹೇಳಿದರು.

ಗದಗ ಜಿಲ್ಲೆಯ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜು ಮತ್ತು ರಾಷ್ಟ್ರೀಯ ಸೇವಾ ಯೋಜನೆಯ ಐಕ್ಯೂ ಎ.ಸಿ ಹಾಗೂ ರೆಡ್ ಕ್ರಾಸ್ ಸಂಯುಕ್ತ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಮಹಿಳೆಯರಿಗೆ ಸೈಬರ್ ಕಾನೂನು ಮತ್ತು ಭ್ರಷ್ಟಾಚಾರ ತಡೆಗಟ್ಟುವಿಕೆಯ ಕುರಿತು ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡುತ್ತಿದ್ದರು.

> ಮುಜಾಪರ, ರಾಜಸ್ಥಾನ, ಪಶ್ಚಿಮ ಬಂಗಾಳ, ಗುರಗಾಂವ್, ನೈಜೇರಿಯಾದಂತಹ ಭಾಗಗಳಿಂದ ಕುಳಿತುಕೊಂಡು ಸೈಬರ್ ವಂಚಕರು ವಂಚನೆ ಮಾಡುತ್ತಾರೆ. ವಂಚನೆಗೆ ಒಳಗಾದವರು ತಕ್ಷಣ 1930ಕ್ಕೆ ಕರೆ ಮಾಡಿ ಮೂಲಕ ಸೈಬರ್ ಕ್ರೈಂ ವಿಭಾಗದ ಸಿಬ್ಬಂದಿಗಳಿಗೆ ತಿಳಿಸಿ ಮತ್ತು ತಕ್ಷಣ ನಿಮ್ಮ ಬ್ಯಾಂಕ್ ವ್ಯವಸ್ಥಾಪಕರಿಗೆ ತಿಳಿಸಿ ಖಾತೆಯನ್ನು ಬಂದ್ ಮಾಡಿಸಬೇಕು ಎಂದರಲ್ಲದೆ, ಯಾರಿಗೂ ಕೂಡಾ ಲಂಚ ಕೊಡಬೇಡಿ. ಲಂಚದ ಬೇಡಿಕೆಯಿಟ್ಟರೆ ಲೋಕಾಯುಕ್ತ ಕಚೇರಿಗೆ ಅರ್ಜಿ ಸಲ್ಲಿಸಿ ಸೂಕ್ತ ಕಾನೂನು ಕ್ರಮಕ್ಕೆ ಮುಂದಾಗಿ ಎಂದು ವಿಜಯ ಬಿರಾದಾರ ತಿಳಿಸಿದರು.

▸▸ 4ನೇ ಪುಟಕ್ಕೆ

### ಕನಸಾಗಿಯೇ ಉಳಿದ ಸಮುದಾಯ ಆರೋಗ್ಯ ಕೇಂದ್ರ

# ಮರೀಚಿಕೆಯಾದ 24*7 ಆರೋಗ್ಯ ಸೇವೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಳಗುಂದ ಪಟ್ಟಣ 25 ಸಾವಿರಕ್ಕಿಂತಲೂ ಹೆಚ್ಚು ಜನಸಂಖ್ಯೆ ಹೊಂದಿದ್ದು, ಇಲ್ಲಿ ಕೇವಲ ಪ್ರಾಥಮಿಕ ಆರೋಗ್ಯ ಕೇಂದ್ರ ಮಾತ್ರ ಇರುವುದರಿಂದ 24 ತಾಸು ಆರೋಗ್ಯ ಸೇವೆ ದೊರೆಯದೇ ಸಾರ್ವಜನಿಕರು ಪರದಾಡುತ್ತಿದ್ದಾರೆ. ಮುಳಗುಂದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಮಾತು ಮಾತಾಗೇ ಉಳಿದಿದ್ದು, ಸರಕಾರದ ಪ್ರಸ್ತಾವನೆಗೆ ಇನ್ನೂ ಚಾಲನೆ ದೊರೆಯದೇ ಇರುವುದು ದುರಾದೃಷ್ಟಕರ ಸಂಗತಿಯಾಗಿದೆ.




ಮುಳಗುಂದ ಪಟ್ಟಣದ ಪ್ರಾಥಮಿಕ ಆರೋಗ್ಯ ಕೇಂದ್ರ ಜನಸಾಮಾನ್ಯರಿಗೆ ಪ್ರಾಥಮಿಕ ಚಿಕಿತ್ಸೆಗಳನ್ನು ನೀಡುತ್ತಿದೆ. ಆದರೆ ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 5 ಗಂಟೆವರೆಗೆ ವೈದ್ಯಾಧಿಕಾರಿಗಳು ಕಾರ್ಯನಿರ್ವಹಣೆ ಮಾಡುತ್ತಿದ್ದು, ಈ ಸಮಯದ ನಂತರ ಹೆರಿಗೆಗೆ ಸಂಬಂಧಿಸಿದ ಸಿಬ್ಬಂದಿಗಳು ಮಾತ್ರ ಕಾರ್ಯನಿರ್ವಹಿಸುತ್ತಾರೆ. ಸಾರ್ವಜನಿಕರಿಗೆ 24 ತಾಸು ಸೇವೆ ಆರೋಗ್ಯ ಸೇವೆ ಸಿಗದೇ ಸಾಕಷ್ಟು ಸಮಸ್ಯೆಯಾಗುತ್ತಿದೆ. ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಬೇಕು ಎಂಬ ಕೂಗು ಸಾರ್ವಜನಿಕರಿಂದ ಕೇಳಿಬರುತ್ತಿದ್ದರೂ ಜನಪ್ರತಿನಿಧಿಗಳು ಕಣ್ಮುಚ್ಚಿ ಕುಳಿತಿದ್ದು ವಿಪರ್ಯಾಸ ಸಂಗತಿ.

ಮುಳಗುಂದ ಪಟ್ಟಣ-ಕ್ಕೆ ಸೇರಿರುವ ಶೀತಾಲಹರಿ, ಬಸಾಪೂರ ಗ್ರಾಮಕ್ಕೂ ಒಂದು ಉಪ ಕೇಂದ್ರ ಇಲ್ಲದೇ ಸಮಸ್ಯೆ ಎದುರಿಸುವಂತಾಗಿದೆ. ಸುಮಾರು ಹತ್ತು ವರ್ಷಗಳಿಂದ ಸಾಕಷ್ಟು ಸಂಘಟನೆಗಳು ಮನವಿ ಸಲ್ಲಿಸಿದರೂ ಸಹ ಜಿಲ್ಲಾ ಆರೋಗ್ಯಾಧಿಕಾರಿಯಾಗಲಿ, ತಾಲೂಕಾ ಆರೋಗ್ಯಾಧಿಕಾರಿಗಳಾಗಲಿ, ಜನಪ್ರತಿನಿಧಿಗಳಾಗಲಿ ಗಮನ ಹರಿಸಿಲ್ಲ ಎಂಬ ಅಸಮಾಧಾನ ಸಾರ್ವಜನಿಕರಲ್ಲಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರವು ಹೆಸರಿಗಷ್ಟೇ ಆರೋಗ್ಯ ಕೇಂದ್ರ ಎವಂತಾಗಿದ್ದು, ಹಗಲಿನಲ್ಲಿ ಮಾತ್ರ ಸೇವೆ ದೊರೆಯುತ್ತದೆ. ರಾತ್ರಿ ಸಮಯದಲ್ಲಿ ಖಾಸಗಿ ಆಸ್ಪತ್ರೆಗೆ ಅಧಿಕ ಹಣ ನೀಡಿ ಚಿಕಿತ್ಸೆ ಪಡೆಯುವ ಸ್ಥಿತಿ ಎದುರಾಗಿದೆ.

> ಮುಳಗುಂದ ಪಟ್ಟಣದಲ್ಲಿ ಹೆಚ್ಚಾಗಿ ಕೃಷಿ ಸಮುದಾಯದವರೇ ಇದ್ದು, ಇಲ್ಲಿನ ಬಡ-ಮಧ್ಯಮ ವರ್ಗದ ಜನರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರವೇ ಆಸರೆಯಾಗಿದೆ. ಸಮುದಾಯ ಆರೋಗ್ಯ ಕೇಂದ್ರವಾದರೆ 24 ಗಂಟೆ ಆರೋಗ್ಯ ಸೇವೆ ದೊರೆತು, ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ. ಇದಕ್ಕೆ ಸಂಬಂಧಿಸಿದ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕಿದೆ.
>
> **- ದೇವರಾಜ ಸಂಗನಪೇಟಿ. ರೈತ ಸಂಘದ ಅಧ್ಯಕ್ಷ, ಮುಳಗುಂದ.**

> ಮುಳಗುಂದ ಪಟ್ಟಣದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೇಗೇರಿಸುವ ಕುರಿತು ಪ್ರಸ್ತಾವನೆ, ಬೇಡಿಕೆಯ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ. ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿದಲ್ಲಿ ಮುಳಗುಂದ ಪಟ್ಟಣಕ್ಕೆ 24 ತಾಸು ಆರೋಗ್ಯ ಸೇವೆ ದೊರೆಯಲಿದೆ.
>
> **- ಪ್ರವೀಣ ತುಪ್ಪದ. ಮು.ಪ್ರಾ.ಆ ವೈದ್ಯಾಧಿಕಾರಿ.**

## ಸಾಕ್ಷಿ ಸುಭಾಷಿತ

ನಮ್ಮ ಮನಸ್ಸಿನ ಶಾಂತಿಗಾಗಿ, ನಮ್ಮ ವೈಯಕ್ತಿಕ ಮಾಹಿತಿಯನ್ನು ಇತರರೊಂದಿಗೆ ಹೆಚ್ಚಾಗಿ ಹಂಚಿಕೊಳ್ಳಬಾರದು.

–ಸುಭಾಷಿತ

## ಸಂಪಾದಕೀಯ

# ಸೌಜನ್ಯಳಿಗೆ ನ್ಯಾಯ ಸಿಗಲಿ

ಯೂಟ್ಯೂಬರ್ ಸಮೀರ್ ಎನ್ನುವ ಯುವಕ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣವನ್ನು ಎಳೆಎಳೆಯಾಗಿ ವಿವರಿಸಿದ ವಿಡಿಯೋ ಒಂದು ಈಗ ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ವೈರಲ್ ಆಗಿದೆ.

ಸಮೀರ್ ಈ ಹಿಂದೆಯೂ ಕೂಡ ಇಂತಹದ್ದೇ ಅನೇಕ ವಿಡಿಯೋಗಳನ್ನು ಮಾಡಿದ್ದಾರೆ. ಅಪರಾಧ ಹಿನ್ನೆಲೆ ಇರುವಂತಹ ಘಟನಾವಳಿಗಳನ್ನ ಆಧರಿಸಿ, ಸಾಮಾನ್ಯ ಜನರಿಗೆ ಸುಲಭವಾಗಿ ಅರ್ಥವಾಗುವಂತೆ ವಿವರಿಸುವ ಅವರ ಶೈಲಿ ಸಾಕಷ್ಟು ಜನರನ್ನ ತಲುಪಿದೆ.

ಈಗ ಧರ್ಮಸ್ಥಳ ಕ್ಷೇತ್ರದ ವ್ಯಾಪ್ತಿಯಲ್ಲಿ ನಡೆದ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ವಿಡಿಯೋ ಬಾರಿ ವೈರಲ್ ಆಗಿದೆ. ಆದರೆ ಸಮೀರ್ ಮುಸ್ಲಿಂ ಎನ್ನುವ ಕಾರಣಕ್ಕೆ, ಕೆಲವರು ಸಮೀರ್ ನನ್ನು ಟೀಕಿಸಿದ್ದಾರೆ. ಹಿಂದುಗಳ ದೇವಸ್ಥಾನದ ಬಗ್ಗೆ ವಿಡಿಯೋ ಮಾಡುವ ಸಮೀರ್, ಮುಸ್ಲಿಮರ ಕುರಿತಾದ ವಿಡಿಯೋ ಏಕೆ ಮಾಡುತ್ತಿಲ್ಲ ಎಂದು ಪ್ರಶ್ನಿಸುತ್ತಿದ್ದಾರೆ.

ಆದರೆ ಹೀಗೆ ಸಮೀರ್ ನನ್ನು ತೆಗಳುವವರು ಸೌಜನ್ಯಳಿಗೆ ನ್ಯಾಯ ಸಿಗಬೇಕು ಎಂದು ಬಯಸುವುದಿಲ್ಲ. ಹಾಗೇ ಒತ್ತಾಯಿಸಿದರೂ ತನಿಖೆ ಚುರುಕುಗೊಳ್ಳಬೇಕು. ತನಿಖೆಗೆ ವಿಳಂಬ ಏಕೆ ಎಂದು ಪ್ರಶ್ನಿಸುವುದಿಲ್ಲ. ಸೌಜನ್ಯ ಪರ ಹೀಗೆ ಧ್ವನಿ ಎತ್ತದವರು ಇವತ್ತು ಸಮೀರ್ ವಿರುದ್ಧ ನಿಂತಿದ್ದಾರೆ.

ಸೌಜನ್ಯಳಿಗೆ ನ್ಯಾಯ ಸಿಗುವಂತೆ ಹೋರಾಟವನ್ನು ಘಟನೆ ನಡೆದಾಗಲೇ ತೀವ್ರಗೊಳಿಸಿದ್ದರೆ ಇವತ್ತು ಸೌಜನ್ಯಳಿಗೆ ನ್ಯಾಯ ಸಿಗುತ್ತಿತ್ತು. ಸಮೀರ್ ವಿಡಿಯೋ ಮಾಡುವ ಪ್ರಮೇಯವೇ ಬರುತ್ತಿರಲಿಲ್ಲ. ಸಮೀರ್ ವಿಡಿಯೋ ವಿಷಯ ವಸ್ತು ಬಗ್ಗೆ ಚರ್ಚೆಗೆ ಹೋಗುವುದು ಬೇಡ. ಆದರೆ ಇನ್ನಾದರೂ ಸೌಜನ್ಯಳಿಗೆ ನ್ಯಾಯ ಸಿಗುವ ಪ್ರಯತ್ನಗಳಾಗಲಿ.

### ಪರೀಕ್ಷೆಯೆಂಬ ಗುಮ್ಮನ ಭಯವೇಕೆ, ಆತ್ಮವಿಶ್ವಾಸವಿದ್ದರೆ ಗೆಲುವು ನಿನ್ನದೇ...

# ಮಕ್ಕಳ ಪರೀಕ್ಷೆ VS ಬದುಕಿನ ಪರೀಕ್ಷೆ



ಪ್ರತಿ ವರ್ಷ ಮಾರ್ಚ್ ಬಂತೆಂದರೆ ಬೇಸಿಗೆಯ ಬಿಸಿಲಿನ ಝಳದ ಜೊತೆಗೆ ಪರೀಕ್ಷೆಯ ಕಾವು ಕೂಡ ಸೇರಿ ಪ್ರತಿ ಮನೆಯಲ್ಲೂ ಒಂದು ರೀತಿಯ ಬಿಸಿ ವಾತಾವರಣ. ಗಲಭೆ–ಗಲಾಟೆಗಳು ಉಂಟಾದಾಗ ಹಾಕುವ 144 ಸೆಕ್ಷನ್‌ನ್ನು ಮನೆಯಲ್ಲೂ ಹಾಕಿದ್ದಾರೇನೋ ಎಂಬಂತಹ ಅನುಭವ ಕೊಡುವುದನ್ನು ಎಲ್ಲರೂ ಗಮನಿಸುತ್ತೇವೆ.

ಮನೆಯ ಹಿರಿ ತಲೆಯಿಂದ ಹಿಡಿದು ಪುಟ್ಟ ಮಕ್ಕಳವರೆಗೆ ಶಾಲೆ, ಕಾಲೇಜುಗಳಲ್ಲಿ ಓದುತ್ತಿರುವ ಮಕ್ಕಳಿರುವ ಮನೆಗಳಲ್ಲಿ ಒಂದು ರೀತಿಯ ಅಘೋಷಿತ ಬಂದ್ ವಾತಾವರಣ ಕಂಡುಬರುತ್ತದೆ. ಇದೆಲ್ಲದಕ್ಕೂ ಕಾರಣ ಪರೀಕ್ಷೆ ಎಂಬ ಗುಮ್ಮನ ಭಯ. ನಿಜ ಹೇಳಬೇಕೆಂದರೆ ಪರೀಕ್ಷೆ ಎಂಬುದು ಮಕ್ಕಳು ಇಡೀ ವರ್ಷ ತಮ್ಮ ತರಗತಿಯಲ್ಲಿ ತಾವು ಕಲಿತ ವಿಷಯಗಳನ್ನು ಎಷ್ಟರಮಟ್ಟಿಗೆ ಅರಿತುಕೊಂಡಿದ್ದಾರೆ ಎಂಬುದರ ಮೌಲ್ಯಮಾಪನ ಮಾತ್ರ. ವರ್ಷವಿಡೀ ಹಾಳು ಹರಟೆಯಲ್ಲಿ ಸಮಯ ಕಳೆಯುವ ಮಕ್ಕಳು ಎಷ್ಟೋ ಬಾರಿ ಪರೀಕ್ಷೆಯ ಸಮಯದಲ್ಲಿ ಉರು ಹೊಡೆದು ಪಾಸ್ ಆಗುತ್ತಾರೆ. ಆದ್ದರಿಂದ ಈ ಮೌಲ್ಯಮಾಪನ ಕೂಡ ಒಂದು ಮಟ್ಟಿಗೆ ಸರಿಯಾದ ಫಲಿತಾಂಶವನ್ನು ನೀಡುವುದಿಲ್ಲ. ಪರೀಕ್ಷೆಯ ಇಂತಹ ಲೋಪದೋಷಗಳನ್ನು ಅರಿತೇ ಪರೀಕ್ಷಾ ಪ್ರಾಧಿಕಾರಗಳು ನಿರಂತರ ಮೌಲ್ಯಮಾಪನ ಕ್ರಮವನ್ನು ಅನುಸರಿಸುತ್ತಿರುವುದು ಸ್ವಾಗತಾರ್ಹ. ಪರೀಕ್ಷೆಯನ್ನು ಎದುರಿಸುತ್ತಿರುವ ಮಕ್ಕಳು ತಿಳಿದುಕೊಳ್ಳಬೇಕಾದ ಕೆಲವು ವಿಷಯಗಳು ಹೀಗಿವೆ.

1. ರ್‍ಯಾಂಕಿಂಗ್‌ನ ಬಗ್ಗೆ ಎಂದೂ ಯೋಚಿಸಬಾರದು. ಓದಿನಲ್ಲಿ ನೀನು ಮುಂದುವರೆಯಬೇಕು ಎಂದಾದರೆ ನೀನಿರುವ ಶೈಕ್ಷಣಿಕ ಮಟ್ಟಕ್ಕಿಂತ ಕೆಳಗೆ ಇಳಿಯದಿದ್ದರೆ ಅದೇ ನಿಜವಾದ ಯಶಸ್ಸು.

2. ಅತ್ಯಮೂಲ್ಯವಾದ ಸಮಯವನ್ನು ಎಂದೂ ಪೋಲು ಮಾಡಬಾರದು. ನಮ್ಮ ಜೀವನ ಕೆಲವೇ ವರ್ಷಗಳದ್ದು. ನಮ್ಮ ಬಹುತೇಕ ಸಮಯ ನಿದ್ದೆ, ಪ್ರಾರ್ಥನೆ, ಕೆಲಸ, ಊಟ ಮತ್ತು ನಾವು ಮಾಡುವ ಕಾರ್ಯ ಚಟುವಟಿಕೆಗಳಲ್ಲಿ ಸೋರಿ ಹೋಗುತ್ತದೆ. ಸಮಯದ ಸದ್ಬಳಕೆ ಮಾಡುವುದು ಅತ್ಯಂತ ಉತ್ತಮ ಹೂಡಿಕೆ. ಯಶಸ್ಸಿನ ಮೂಲ ಮಂತ್ರ ಉತ್ತಮ ಸಮಯ ನಿರ್ವಹಣೆ.

3. ಅತ್ಯದ್ಭುತವಾದುದು ನಮ್ಮ ಬದುಕಿನಲ್ಲಿ ಘಟಿಸುತ್ತದೆ ಎಂಬ ಆಶಯದಿಂದ ಕಾಯಬಾರದು. ಅವಕಾಶಗಳು ನಿನ್ನ ಮನೆಯ ಬಾಗಿಲನ್ನು ತಟ್ಟುವುದಿಲ್ಲ, ಬದಲಾಗಿ ನೀನು ಅವಕಾಶಗಳನ್ನು ಖುದ್ದು ಸೃಷ್ಟಿಸಿಕೊಳ್ಳಬೇಕು. ಯಶಸ್ಸು ನಿನಗಾಗಿ ಸೃಷ್ಟಿಯಾಗುತ್ತದೆ.

4. ನೀನು ತಿನ್ನುವ ಆಹಾರವಿರಲಿ, ನಿನ್ನ ತರಬೇತಿಯಾಗಲಿ ಪುಟ್ಟ ಮಗುವಿನಂತೆ ಪ್ರತಿಯೊಂದಕ್ಕೂ ತಕರಾರು ಮಾಡಬೇಡ. ತಾಳ್ಮೆಯ ಮತ್ತು ಯುದ್ಧವೀರನಂತಹ ವ್ಯಕ್ತಿತ್ವ ನಿನ್ನದಾಗಿರಲಿ. ಬದುಕು ನಿನ್ನೆಡೆಗೆ ಎಸೆಯುವ ಅದೆಷ್ಟೇ ಕಠಿಣ ಸವಾಲುಗಳಿದ್ದರೂ ಅವುಗಳನ್ನು ಯಶಸ್ವಿಯಾಗಿ ಎದುರಿಸು, ಕುಂದದೆ ಕುಗ್ಗದೆ ಮುನ್ನಡೆಯುವುದನ್ನು ಕಲಿ.

5. ಪ್ರತಿ ಸೋಲಿನ ನಂತರ ಎದ್ದು ಹೋರಾಡುವ ಛಲವನ್ನು ಬೆಳೆಸಿಕೊ. ನೀನು ತಿಳಿದುಕೊಂಡಿರುವುದಕ್ಕಿಂತ ಹೆಚ್ಚು ಶಕ್ತಿಶಾಲಿಯಾಗಿರುವ ನೀನು ವಿದ್ಯಾರ್ಥಿ ದಿಸೆಯಲ್ಲಿ ಒಳ್ಳೆಯ ಸಾತ್ವಿಕ ಆಹಾರ, ಅವಶ್ಯ ಪ್ರಮಾಣದ ನಿದ್ದೆ, ನಿರಂತರ ಅಭ್ಯಾಸ ಮತ್ತು ಸದಾ ಮುಗುಳ್ನಗೆಯನ್ನು ಹೊತ್ತು ಸವಾಲನ್ನು ಸ್ವೀಕರಿಸುವ ಅಭ್ಯಾಸ ಮಾಡಿಕೋ. ಗಟ್ಟಿ ಮುಟ್ಟಾದ ದೇಹ ಮತ್ತು ಆತ್ಮವಿಶ್ವಾಸ ನಿನ್ನಲ್ಲಿದ್ದರೆ ನೀನೇ ಚಾಂಪಿಯನ್ ಎಂಬ ಭಾವ ನಿನ್ನನ್ನು ಯಶಸ್ಸಿನೆಡೆಗೆ ಕೊಂಡೊಯ್ಯುತ್ತದೆ.

6. ಸಾಮಾಜಿಕವಾಗಿ ಎಲ್ಲರೊಂದಿಗೆ ಬೆರೆಯುವುದರಿಂದ ನಿನ್ನ ವ್ಯಾವಹಾರಿಕ ತಿಳುವಳಿಕೆ ಹೆಚ್ಚಾಗುತ್ತದೆ ಮತ್ತು ನಿನಗೆ ಜನರೊಂದಿಗೆ ಹೇಗೆ ವ್ಯವಹರಿಸಬೇಕು ಎಂಬ ಜ್ಞಾನವನ್ನು ನೀಡುತ್ತದೆ. ನಿಮ್ಮ ಮೆದುಳು ಹೊಸದೇನನ್ನೂ ಉತ್ಪಾದಿಸುವುದಿಲ್ಲ, ಆದ್ದರಿಂದ ಸಾಮಾಜಿಕವಾಗಿ ಕಲಿಕೆಯ ಯಾವುದೇ ಅವಕಾಶಗಳನ್ನು ಕಳೆದುಕೊಳ್ಳದಿರು. ಹಾಗೆಂದು ಅತಿಯಾಗಿ ಬೆರೆಯದಿರು.

7. ಅವರಿವರನ್ನು ಮಾದರಿಯಾಗಿ ಇಟ್ಟುಕೊಳ್ಳುವ ಬದಲು ನಿನ್ನನ್ನೇ ನೀನು ಮಾದರಿಯಾಗಿಸಿಕೋ.

ನೀನು ದಡ್ಡನಲ್ಲ. ಅವರಿವರಂತೆ ನಿನ್ನನ್ನು ನೀನು ಬದಲಾಯಿಸಿಕೊಳ್ಳುವ ಬದಲು, ನೀನು ಬಯಸುವಂತೆ ನಿನ್ನ ಬದುಕನ್ನು ಬದಲಾಯಿಸಿಕೊಳ್ಳುವ ನಿಟ್ಟಿನಲ್ಲಿ ನಿಮ್ಮ ಮೆದುಳಿಗೆ ಕೆಲಸವನ್ನು ನೀಡುವ ಮೂಲಕ ಅದನ್ನು ಸದಾ ಕ್ರಿಯಾಶೀಲವಾಗಿರಿಸಿಕೊಳ್ಳುವ ಜವಾಬ್ದಾರಿ ನಿನ್ನದೇ ಆಗಿದ್ದರೆ ಯಶಸ್ಸು ಖಚಿತ.

8. ಹರೆಯದ ತುಮುಲಗಳು ಕಾಡುವ ಈ ಹೊತ್ತಿನಲ್ಲಿ ಯಾರೊಂದಿಗೂ ಅತಿಯಾದ ಆತ್ಮೀಯತೆ ಬೇಡ. ನಿಮ್ಮ ಜೀವನದ ಅತಿ ಮುಖ್ಯ ಪಾತ್ರ ನಿಮ್ಮ ಹೊರತು ನಿಮ್ಮ ಕುಟುಂಬದ ಸದಸ್ಯರ ಹೊರತು ಬೇರಾರೂ ಅಲ್ಲ ಎಂಬ ಸತ್ಯವನ್ನು ಅರಿತುಕೋ. ಒಳ್ಳೆಯ ಸ್ನೇಹ ಬೇರೆ, ಆದರೆ ಒಂದಲ್ಲ ಒಂದು ದಿನ ಅವರು ನಿಮ್ಮಿಂದ ದೂರವಾಗಬಹುದು ಎಂಬ ಜಾಗೃತಿ ನಿಮ್ಮಲ್ಲಿದ್ದರೆ ಖಂಡಿತವಾಗಿಯೂ ಯಶಸ್ಸು ನಿಮ್ಮದು.

9. ಬೇರೆಯವರು ನೀವು ಏನಾಗಲಿ ಎಂದು ಇಚ್ಛಿತ್ತಾರೋ ಹಾಗೆ ಇರಲು ಪ್ರಯತ್ನಿಸದಿರಿ. ನೀವು ನಿಮಗೆ ಬೇಕಾದಂತೆ ನಿಮ್ಮಲ್ಲಿ ಬದಲಾವಣೆಯನ್ನು ತಂದುಕೊಳ್ಳಿ. ಮೌಲ್ಯಗಳನ್ನು ಹೊಂದಿದ ದೇವರನ್ನು ಸಂಪ್ರೀತಗೊಳಿಸುವ ಆತ್ಮ ತೃಪ್ತಿಯ ಜೀವನವನ್ನು ನಿಮ್ಮದಾಗಿಸಿಕೊಳ್ಳಿ.

ಮೇಲಿನ ಸಲಹೆಗಳನ್ನು ಶೈಕ್ಷಣಿಕ ಬದುಕಿನಲ್ಲಿ ಮಾತ್ರವಲ್ಲ, ಜೀವನದ ಎಲ್ಲಾ ವಿಭಾಗಗಳಲ್ಲಿಯೂ ಅಳವಡಿಸಿಕೊಂಡರೆ ಯಶಸ್ಸು ಖಂಡಿತವಾಗಿಯೂ ನಿಮ್ಮದಾಗುತ್ತದೆ. ಶೈಕ್ಷಣಿಕ ಬದುಕು ನಮ್ಮ ವೈಯಕ್ತಿಕ ಬದುಕಿನಿಂದ ಹೊರತಲ್ಲ ಎಂಬ ಸತ್ಯದ ಅರಿವು ನಮಗೆ ದೊರೆತಾಗ ನಾವು ಸಂಪೂರ್ಣ ಆತ್ಮ ವಿಶ್ವಾಸದಿಂದ ಕಾರ್ಯನಿರ್ವಹಿಸುತ್ತೇವೆ.. ಅಂತಹ ಆತ್ಮವಿಶ್ವಾಸದ ನಡೆ ನುಡಿ ಮತ್ತು ಕಾರ್ಯವೈಖರಿಗಳು ಯಶಸ್ಸಿಗೆ ರಹದಾರಿ. ಏನಂತೀರಾ ಸ್ನೇಹಿತರೆ?

**– ವೀಣಾ ಹೇಮಂತ್‌ಗೌಡ ಪಾಟೀಲ್, ಮುಂಡರಗಿ.**

### ‘ಮಹಿಳಾ ಸಾಂಸ್ಕೃತಿಕ ಹಬ್ಬ–2025’ ಕಾರ್ಯಕ್ರಮವನ್ನು ಉದ್ಘಾಟಿಸಿದ ಸಚಿವ ಎಂ.ಬಿ. ಪಾಟೀಲ

# ಮಹಿಳೆಯರು ತಮ್ಮ ಭವಿಷ್ಯವನ್ನು ಉಜ್ವಲವಾಗಿಸಿಕೊಳ್ಳಿ

■ **ವಿಜಯಸಾಕ್ಷಿ ಸುದ್ದಿ, ವಿಜಯಪುರ**

ಮಹಿಳೆಯರಿಗೆ ಅವಕಾಶಗಳನ್ನು ಕಲ್ಪಿಸಿಕೊಟ್ಟರೆ ಮಾತ್ರ ದೇಶದ ಸಮಗ್ರ ಅಭಿವೃದ್ಧಿ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಸಾಧ್ಯ. ಮಹಿಳೆ ಹಲವಾರು ಕ್ಷೇತ್ರದಲ್ಲಿ ತನ್ನನ್ನು ತಾನು ತೊಡಗಿಸಿಕೊಂಡಿದ್ದು, ಇಂದು ಇಡೀ ವಿಶ್ವದಲ್ಲೇ ಅಗ್ರಸ್ಥಾನ ಪಡೆದುಕೊಂಡಿದ್ದಾಳೆ ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ ಹೇಳಿದರು.




ಸರ್ಕಾರವು ಈ ಮಹಿಳಾ ವಿಶ್ವವಿದ್ಯಾನಿಲಯದ ಮೂಲ ಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಪ್ರೋತ್ಸಾಹ ನೀಡಿದರೆ ಇನ್ನೂ ಹೆಚ್ಚಿನ ಹೆಣ್ಣುಮಕ್ಕಳು ಗುಣಾತ್ಮಕ ಶಿಕ್ಷಣ ಪಡೆದು, ತಮ್ಮ ಭವಿಷ್ಯವನ್ನು ಉಜ್ವಲವಾಗಿಸಿಕೊಳ್ಳಲು ಸಾಧ್ಯ. ಸಮಗ್ರ ಸಮಾಜದ ಬೆಳವಣಿಗೆಗೆ ಮಹಿಳೆಯರ ಶಿಕ್ಷಣ ಅತ್ಯಗತ್ಯವಾಗಿರುವುದರಿಂದ, ಈ ವಿಶ್ವವಿದ್ಯಾನಿಲಯ ಮತ್ತಷ್ಟು ಬಲಪಡಿಸಲು ನಮ್ಮೆಲ್ಲರ ಸಹಕಾರ ಮತ್ತು ಪ್ರೋತ್ಸಾಹ ಅಗತ್ಯ.

**– ಎಂ.ಬಿ. ಪಾಟೀಲ. ಸಚಿವರು, ವಿಜಯಪುರ**

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಅಹಲ್ಯಾಬಾಯಿ ಸ್ನಾತಕೋತ್ತರ ಮಹಿಳಾ ಅಧ್ಯಯನ, ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಶನಿವಾರ ಆಯೋಜಿಸಿದ್ದ ‘ಮಹಿಳಾ ಸಾಂಸ್ಕೃತಿಕ ಹಬ್ಬ–2025’ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳಾ ವಿಶ್ವವಿದ್ಯಾನಿಲಯ ಮಹಿಳೆಯರ ಶಕ್ತಿಯನ್ನು ಗುರುತಿಸುವ ಹಾಗೂ ಅವರ ಸೌಭಾಗ್ಯವನ್ನು ಬೆಳೆಸುವ ಪ್ರಮುಖ ಕೇಂದ್ರವಾಗಿದೆ. ಇದು ಕೇವಲ ಶಿಕ್ಷಣ ನೀಡುವ ಕೇಂದ್ರವಷ್ಟೇ ಅಲ್ಲ, ಮಹಿಳೆಯರಲ್ಲಿ ಆತ್ಮವಿಶ್ವಾಸ, ಸ್ವಾಯತ್ತತೆ ಮತ್ತು ನಾಯಕತ್ವ ಗುಣಗಳನ್ನು ವೃದ್ಧಿಸಲು ಸಹಾಯ ಮಾಡುತ್ತದೆ. ಸಮಾನತೆ ಮತ್ತು ನ್ಯಾಯದ ತತ್ವಗಳನ್ನು ಬೆಳೆಸುವ ಈ ಸಂಸ್ಥೆ, ಮಹಿಳೆಯರನ್ನು ಎಲ್ಲ ಕ್ಷೇತ್ರಗಳಲ್ಲಿ ಮುಂಚೂಣಿಗೆ ತರುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿಯ ಹಂಗಾಮಿ ಕುಲಪತಿ ಪ್ರೊ. ಶಾಂತಾದೇವಿ ಟಿ ಮಾತನಾಡಿ, ಮಹಿಳಾ ಸಬಲೀಕರಣವನ್ನು ವೃದ್ಧಿಸಲು ನಮ್ಮ ವಿಶ್ವವಿದ್ಯಾನಿಲಯದ ಬೋಧಕ ಮತ್ತು ಬೋಧಕೇತರ ವರ್ಗ ನಿರಂತರ ಶ್ರಮವಹಿಸುತ್ತಿದ್ದು, ವಿದ್ಯಾರ್ಥಿನಿಯರು ನೀಡಲಾಗುವ ಸೌಕರ್ಯಗಳನ್ನು ಸದುಪಯೋಗಪಡಿಸಿಕೊಂಡು ತಮ್ಮ ಸಮಗ್ರ ಅಭಿವೃದ್ಧಿಯತ್ತ ಮುಂದುವರೆಯಬೇಕು ಎಂದರು.

ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಜಿಲ್ಲಾ ಉಸ್ತುವಾರಿ ಸಚಿವರ ಮಾಧ್ಯಮ ಸಲಹೆಗಾರ ಮಹಾಂತೇಶ ಬಿರಾದಾರ, ಪತ್ರಕರ್ತ ಮಹೇಶ ಶೆಟಗಾರ, ಮಹಿಳಾ ವಿವಿಯ ವಿವಿಧ ನಿಕಾಯುಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ಸ್ವಾಗತಿಸಿದರು. ಮಹಿಳಾ ಸಾಂಸ್ಕೃತಿಕ ಹಬ್ಬದ ಸದಸ್ಯ ಸಂಚಾಲಕಿ ಪ್ರೊ. ಲಕ್ಷ್ಮೀದೇವಿ ವೈ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಡಾ. ಸರೋಜಾ ಸಂತಿ ವರದಿ ವಾಚನ ಮಾಡಿದರು. ಡಾ. ಭಾಗಶ್ರೀ ದೊಡ್ಡಮನಿ ಸಾಧಕಿಯರನ್ನು ಸನ್ಮಾನಿಸಿದರು. ಪ್ರೊ. ರೇಣುಕಾ ಮೇಟಿ ಕಾರ್ಯಕ್ರಮ ನಿರೂಪಿಸಿದರು. ಡಾ. ಶಶಿಕಲಾ ರಾಠೋಡ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿನಿಯರಿಗೆ ಬಹುಮಾನ ಪಟ್ಟಿ ಪ್ರಸ್ತುತಪಡಿಸಿದರು. ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್.ಎಂ. ಚಂದ್ರಶೇಖರ ವಂದಿಸಿದರು.

ಇದೇ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ, ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಮಹಿಳಾ ವಿವಿಯ ಹಂಗಾಮಿ ಕುಲಪತಿ ಪ್ರೊ. ಶಾಂತಾದೇವಿ ಟಿ, ಸಿಂಡಿಕೇಟ್ ಸದಸ್ಯೆ ಮಮತಾ, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್.ಎಂ. ಚಂದ್ರಶೇಖರ, ಮಹಿಳಾ ಸಾಂಸ್ಕೃತಿಕ ಹಬ್ಬದ ಸದಸ್ಯ ಸಂಚಾಲಕಿ ಲಕ್ಷ್ಮೀದೇವಿ ವೈ ಅವರನ್ನು ಸನ್ಮಾನಿಸಲಾಯಿತು.

# ಅಕ್ಕ ನಾಗಮ್ಮನವರ ಕುರಿತು ಉಪನ್ಯಾಸ ನಾಳೆ

■ **ವಿಜಯಸಾಕ್ಷಿ ಸುದ್ದಿ, ಗದಗ**



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮಾರ್ಚ್ 9ರಂದು ಬೆಳಿಗ್ಗೆ 7.30ಕ್ಕೆ ನಡೆಯಲಿರುವ ಬಸವದಳದ 1636ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ ಹಾಗೂ ಕ್ರಾಂತಿಗಂಗೋತ್ರಿ ಅಕ್ಕ ನಾಗಮ್ಮನವರ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕ ಶರಣ ಎಸ್.ಎನ್. ಹಕಾರಿ ವಹಿಸುವರು. ಶರಣ ಸಾಹಿತಿಗಳಾದ ಶರಣೆ ಗಿರಿಜಕ್ಕ ಧರ್ಮರಡ್ಡಿ ಸಹಜಶಿವಯೋಗ ಮಾಡುವರು. ಶರಣೆ ಸನ್ನಿಧಿ ವಿ.ಲಿಂಗಧಾಳ ಉಪನ್ಯಾಸ ಮಾಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

ಕವನ

## ನನ್ನ ಮನೆಯ ಒಡತಿ ನನ್ನವ್ವ



ಹೆಣ್ಣು ಹುಣ್ಣೆಂಬ ಹುಂಬರಿಗೊಮ್ಮೆ ತಿಳಿಸು
ತಾಯಿ ಭಾರತಿ, ಭುವನ ಕನ್ನಡತಿ
ನನ್ನ ಮನೆಯ ಒಡತಿ ನನ್ನವ್ವ
ಹೆಣ್ಣೆಂದು, ಮನೆಯ ಕಣ್ಣೆಂದು.

ಬಣ್ಣದ ಬಳೆಗಳ ಮುದ್ದು ತಂಗಿ
ಉತ್ತರದಿ ಹರಿವ ಪವಿತ್ರ ಗಂಗಿ
ಮನದ ದೀಪವು ನಿನ್ನ ಸತಿಯು
ಹೆಣ್ಣೆಂದು, ಜೀವನದ ಕಣ್ಣೆಂದು

ತಿದ್ದಿ ತೀಡಿದ ಗುರುಮಾತೆ
ಹೊತ್ತು ತಿರುಗಿದ ಹಿರಿಯಕ್ಕ
ತಾಜಮಹಲಿನ ಯಮುನಕ್ಕ
ಹೆಣ್ಣೆಂದು, ಜಗದ ಕಣ್ಣೆಂದು

ಅಂಬೆಗಾಲಿಡುವ ನಿನ ಮುದ್ದು ಮರಿ
ಕನ್ನಡಿಗನ ಜೀವನದಿ ಕಾವೇರಿ
ಹಸಿರು ಸೀರೆಯ ಸಹ್ಯಾದ್ರಿ
ಹೆಣ್ಣೆಂದು, ಪ್ರಕೃತಿಯ ಕಣ್ಣೆಂದು



ಹೆಣ್ಣು ಹುಣ್ಣೆಂದು ಜರಿಯದಿರು
ನಿನ ಹುಟ್ಟು ತಾಯಿಯ ಪಾದಕ್ಕೆ
ನಿನ ಬಾಲ್ಯ ಅಕ್ಕತಂಗಿಯರ ಅಂಗೈಗೆ
ನಿನ ಯವ್ವನ ಸತಿಯ ದೇಹಕ್ಕೆ
ಕೊನೆಯಂತೂ ಮಗಳ ಮಮಕಾರಕ್ಕೋ
ಮನುಜ, ತಿಳಿ ಮನುಜ, ಕಲಿ ಮನುಜ

**– ಲಿಂಗರಾಜ ಕುರುಬರ. ವಕೀಲರು, ಧಾರವಾಡ.**

### ಗದಗ ಭಾವಸಾರ ವ್ಹಿಜನ್ ಇಂಡಿಯಾದ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ದೀಪಕ ಮಾತಾಡೆ

# ಭಾವಸಾರ ವ್ಹಿಜನ್‌ದಿಂದ ಸಮಾಜಮುಖಿ ಕಾರ್ಯ

■ **ವಿಜಯಸಾಕ್ಷಿ ಸುದ್ದಿ, ಗದಗ**

ಭಾವಸಾರ ವ್ಹಿಜನ್ ಇಂಡಿಯಾ ಸೇವಾ ಸಂಸ್ಥೆಯಾಗಿದ್ದು, ಭಾವಸಾರ ಸಮುದಾಯದ ಕ್ಷೇಮಾಭಿವೃದ್ಧಿಗೆ ಶ್ರಮಿಸುವ ಮೂಲಕ ಸಮಾಜಮುಖಿಯಾಗಿ ಕಾರ್ಯ ಮಾಡುತ್ತಿದೆ ಎಂದು ಭಾವಸಾರ ವ್ಹಿಜನ್ ಇಂಡಿಯಾ ಏರಿಯಾ 101ರ ಗವರ್ನರ್ ದೀಪಕ ಮಾತಾಡೆ ಹೇಳಿದರು.

ಅವರು ಗದುಗಿನ ಶ್ರೀ ವಿಠ್ಠಲ ಮಂದಿರದ ಸಭಾಂಗಣದಲ್ಲಿ ಭಾವಸಾರ ವ್ಹಿಜನ್ ಇಂಡಿಯಾದ ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರಿಸಿ ಮಾತನಾಡಿದರು.

ವ್ಹಿಜನ್ ಕಳೆದ 25 ವರ್ಷಗಳಿಂದ ಸಮಾಜದ ಏಳ್ಗೆಗಾಗಿ ತನ್ನದೇ ಆದ ಇತಿಮಿತಿಯಲ್ಲಿ ಕಾರ್ಯ ಮಾಡುತ್ತಿದೆ. ಬರಲಿರುವ ದಿನಗಳಲ್ಲಿಯೂ ಈ ಸೇವಾಕೈಂಕರ್ಯವನ್ನು ಮುಂದುವರೆಸಲಿದೆ. ಈ ಕಾರ್ಯಕ್ಕೆ ಸಮಾಜದ ಹಿರಿಯರು, ಮಹಿಳೆಯರು ಹಾಗೂ ಯುವಕರು ಕೈಜೋಡಿಸಿ ಸಂಘಟನೆಯ ಬಲವರ್ಧನೆಗೆ ಮುಂದಾಗಬೇಕೆಂದರು.

ಪದಗ್ರಹಣ ಸಮಾರಂಭದ ಅಧಿಕಾರಿಗಳಾಗಿ ಆಗಮಿಸಿದ್ದ ವ್ಹಿಜನ್‌ನ ಗೌರವ ಕಾರ್ಯದರ್ಶಿ ಜಗದೀಶ ಹಂಚಾಟೆ, ರಾಷ್ಟ್ರೀಯ ಖಜಾಂಚಿ ಪ್ರಕಾಶ ತಿರುಮಲೆ, ಫೌಂಡರ್ ಸೆಕ್ರೆಟರಿ ರಮೇಶ ಧರಜಕರ, ಮಾಜಿ ಗವರ್ನರ್ ಕೆ.ಜಿ. ಟಿಕಾರೆ,




ರಾಷ್ಟ್ರೀಯ ಕಾರ್ಯಕಾರಿ ಮಂಡಳಿ ಸದಸ್ಯ ಅಶ್ವಥ್ ಸುಲಾಖೆ ಸಂದರ್ಭೋಚಿತವಾಗಿ ಮಾತನಾಡಿದರು.

ಭಾವಸಾರ ವ್ಹಿಜನ್ ಇಂಡಿಯಾ ಗದಗ ಗವರ್ನರ್ ಅಂಬಾಸ್ಸಡಾರ್ ಆಗಿ ಜಯಶ್ರೀ ತ್ರಿಮಲ್ಲೆ, ನೂತನ ಅಧ್ಯಕ್ಷರಾಗಿ ಡಾ. ಪ್ರವೀಣ ಸರ್ವದೆ, ಉಪಾಧ್ಯಕ್ಷರಾಗಿ ವೀಣಾ ಸುಲಾಖೆ, ನಿಯೋಜಿತ ಅಧ್ಯಕ್ಷರಾಗಿ ಸುನೀಲ ದಾಮೋದರ, ಕಾರ್ಯದರ್ಶಿಯಾಗಿ ಡಾ. ಅಶ್ವಿನಿ ಸರ್ವದೆ, ಸಹ ಕಾರ್ಯದರ್ಶಿಯಾಗಿ ವೀಣಾ ಕಪಟಕರ, ಖಜಾಂಚಿಯಾಗಿ ನಾಗರಾಜ ವಾದೋನೆ, ಸಹ ಖಜಾಂಚಿಯಾಗಿ ರಾಜೀವ ಬೇದ್ರೆ, ಕ್ಯಾಪ್ಟನ್ ಆಗಿ ಪರಶುರಾಮ ನವಲೆ, ನಿರ್ದೇಶಕರಾಗಿ ವಿಜಯಾ ನವಲೆ, ಸುಜಾತಾ ಸುಲಾಖೆ, ಅನುರಾಧಾ ವೈಕುಂತೆ, ವೆಂಕಟೇಶ ದೋಂಗಡೆ, ಸಂಚನಾ ಬೇದ್ರೆ, ಕೃಷ್ಣಾ ಜಾಧವ, ವೆಂಕಟೇಶ ಮಹೇಂದ್ರಕರ, ಸಲಹಾ ಸಮಿತಿಯ ಸದಸ್ಯರಾಗಿ ಜನಾರ್ಧನ ಹವಳೆ, ರಾಜೇಂದ್ರ ತ್ರಿಮಲ್ಲೆ, ಡಾ. ದತ್ತಾತ್ರೇಯ ವೈಕುಂತೆ, ರಾಜಶೇಖರ ಕಪಟಕರ, ಮಂಜುನಾಥ ಉತ್ತರಕರ, ಷಣ್ಮುಖ ಸುಲಾಖೆ, ಅಶ್ವಥ್ ಸುಲಾಖೆ ಅಧಿಕಾರ ವಹಿಸಿಕೊಂಡರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಗದಗ ಭಾವಸಾ ಕ್ಷತ್ರಿಯ ಸಮಾಜದ ಟ್ರಸ್ಟ್ ಕಮಿಟಿ ಅಧ್ಯಕ್ಷ ಜ್ಞಾನೇಶ್ವರ ಉತ್ತರಕರ ಮಾತನಾಡಿ, ಭಾವಸಾರ ವ್ಹಿಜನ್ ಸಮಾಜ ಬಾಂಧವರ ಕಲ್ಯಾಣಕ್ಕಾಗಿ ಯೋಜನೆಗಳನ್ನು ರೂಪಿಸಬೇಕು. ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಮಹಿಳೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಅಗತ್ಯ ಕ್ರಮ, ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕುಟುಂಬಕ್ಕೆ ನೆರವು ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಸಲಹೆ ನೀಡಿದರು.

ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಡಾ. ಪ್ರವೀಣ ಸರ್ವದೆ ಮಾತನಾಡಿ, ತಮ್ಮ ಅಧಿಕಾರದ ಅವಧಿಯಲ್ಲಿ ಸಾಮಾಜಿಕ, ಶೈಕ್ಷಣಿಕ, ಆರೋಗ್ಯ ಕಾರ್ಯಕ್ರಮಗಳಲ್ಲಿ ಮಹಿಳೆಯರಿಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವದಾಗಿ ಹೇಳಿದರು.

ಸಮಾರಂಭದಲ್ಲಿ ಶ್ರೀ ಚಿದಂಬರ ಪಂಚಾಂಗವನ್ನು ಬಿಡುಗಡೆಗೊಳಿಸಿ ಸಮಾಜಬಾಂಧವರಿಗೆ ಉಚಿತವಾಗಿ ವಿತರಿಸಲಾಯಿತು. ರಾಜು ಕಪಟಕರ ನಿರೂಪಿಸಿದರು, ಕಾರ್ಯದರ್ಶಿ ಡಾ. ಅಶ್ವಿನಿ ಸರ್ವದೆ ವಂದಿಸಿದರು.

## ಅಭಿವೃದ್ಧಿ ಪರ ರಾಜ್ಯ ಮುಂಗಡ ಪತ್ರ

■ವಿಜಯಸಾಕ್ಷಿ ಸುದ್ದಿ, ಗದಗ

ಸಿಎಂ ಸಿದ್ದರಾಮಯ್ಯನವರು ಮಂಡಿಸಿರುವ ರಾಜ್ಯ ಮುಂಗಡ ಪತ್ರವು ಎಲ್ಲಾ ಕ್ಷೇತ್ರವನ್ನು ಗಮನದಲ್ಲಿ ಇಟ್ಟುಕೊಂಡಿರುವ ಅಭಿವೃದ್ಧಿ ಪರ ಮುಂಗಡ ಪತ್ರವಾಗಿದೆ ಎಂದು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಹಾಗೂ ಸಂಸ್ಥೆಯ ತೆರಿಗೆ ಉಪ ಸಮಿತಿ ಚೇರಮನ್ ಮಲ್ಲಿಕಾರ್ಜುನ ವ್ಹಿ.ಪಟ್ಟಣಶೆಟ್ಟಿ ಇವರು ಸ್ವಾಗತಿಸಿದ್ದಾರೆ.

5 ಲಕ್ಷದವರೆಗೆ ನಗದು ರಹಿತ ಚಿಕಿತ್ಸಾ ಸೌಲಭ್ಯ, ಪತ್ರಕರ್ತರಿಗೆ ಸಂಜೀವಿನಿ ಯೋಜನೆ ಜಾರಿ, ಕ್ಲಸ್ಟರ್ ಸ್ಥಾಪನೆಗೆ 25 ಕೋಟಿ ಅನುದಾನ, 5 ಸಾವಿರ ಕಿರು ಆಹಾರ ಸಂಸ್ಕರಣಾ ಘಟಕ ಸ್ಥಾಪನೆ ಮತ್ತು 58 ಪ್ರಯೋಗಾಲಯ, ಸೋಲಾರ್ ಪಂಪ್‌ಸೆಟ್‌ಗಳಿಗೆ ಶೇ, 50ರಷ್ಟು ರಿಯಾಯತಿ, ನೇಕಾರರಿಗೆ ರಿಯಾಯತಿಯಲ್ಲಿ ವಿದ್ಯುತ್ ನೀಡಲು 100 ಕೋಟಿ ಮೀಸಲು, ಕೈಗಾರಿಕಾ ಪ್ರದೇಶ ಭೂಮಿ ಹಂಚಿಕೆಯಲ್ಲಿ ಮೀಸಲಾತಿ, ಬೆಣ್ಣೆಹಳ್ಳ ಪ್ರವಾಹದ ತಡೆಗೆ 200 ಕೋಟಿ ಅನುದಾನ ಮೀಸಲು, ನಮ್ಮ ಮೆಟ್ರೋ 3ನೇ ಹಂತದ ಯೋಜನೆಯನ್ನು ದೇವನಹಳ್ಳಿವರೆಗೆ ವಿಸ್ತರಣೆ ಮತ್ತು ದೇವನಹಳ್ಳಿಯಲ್ಲಿ ಮೊಬೈಲ್ ಘಟಕ ಸ್ಥಾಪನೆ, ಗ್ಯಾರಂಟಿ ಯೋಜನೆಗೆ 51.354 ಕೋಟಿ ಮೀಸಲು ಮಾಡಿರುವುದು ಸ್ವಾಗತಾರ್ಹ ಕ್ರಮವೆಂದು ಸಂಸ್ಥೆಯ ಉಪಾಧ್ಯಕ್ಷ ವಿಜಯಕುಮಾರ ಎಸ್.ಮಾಟಲದಿನ್ನಿ,

ರೇಲ್ವೆ ಉಪ ಸಮಿತಿ ಚೇರಮನ್ ಜಿ.ಕೆ. ಆದಪ್ಪಗೌಡ್ರ ಸೇರಿದಂತೆ ಸಂಸ್ಥೆಯ ಪದಾಧಿಕಾರಿಗಳು, ಮಾಜಿ ಅಧ್ಯಕ್ಷರು, ತೆರಿಗೆ ಸಲಹೆಗಾರರು ಹಾಗೂ ಲೆಕ್ಕ ಪರಿಶೋಧಕರು ತಿಳಿಸಿದ್ದಾರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಪಂ. ಪುಟ್ಟರಾಜರು ನಾಡು ಕಂಡ ವಿಸ್ಮಯ

■ವಿಜಯಸಾಕ್ಷಿ ಸುದ್ದಿ, ಗದಗ

ಅಂಧ-ಅನಾಥರ ಬಾಳಿನ ನಂದಾದೀಪ, ಆಶ್ರಯದಾತರು ಪಂಡಿತ ಡಾ. ಪುಟ್ಟರಾಜ ಗವಾಯಿಗಳು. ಅಂಧರಾದರೂ ಏನನ್ನಾದರೂ ಸಾಧಿಸಬಹುದು ಎಂಬುದನ್ನು ತೋರಿಸಿಕೊಟ್ಟಿದ್ದಾರೆ. ಅವರು ಈ ನಾಡು ಕಂಡ ವಿಸ್ಮಯ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2735ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಪಂಡಿತ ಡಾ. ಪುಟ್ಟರಾಜ ಕವಿ ಗವಾಯಿಗಳವರು ಶ್ರೇಷ್ಠ ಸಾಧಕರು ಮತ್ತು ಪಂಡಿತರು. ಅನೇಕ ಪುರಾಣ, ಸಾಹಿತ್ಯ ಕೃತಿಗಳನ್ನು ಬರೆದಿದ್ದಾರೆ. ಅವರು ಕನ್ನಡ, ಸಂಸ್ಕೃತ, ಹಿಂದಿ ಬಲ್ಲವರಾಗಿದ್ದರು. ಅಂತೆಯೇ ಅವರನ್ನು ತ್ರಿಭಾಷಾ ಕವಿ ಎಂದು ಕರೆಯುತ್ತಾರೆ. ಚಂಪೂ ಕೃತಿಗಳನ್ನು ರಚಿಸಿದ್ದಾರೆ. ಪುಟ್ಟರಾಜರು ಉಭಯಗಾನ ವಿಶಾರದರು. ಅವರು ಕಂಠ, ಸಂಗೀತ ಹಾಗೂ ವಾದ್ಯ ಸಂಗೀತದಲ್ಲಿ ಪರಿಣಿತಿಯನ್ನು ಪಡೆದಿದ್ದರಿಂದ ಅವರನ್ನು ಉಭಯಗಾನ ವಿಶಾರದರು ಎಂದೂ ಕರೆಯಲಾಗಿದೆ ಎಂದರು.



ಪುಟ್ಟರಾಜ ಕವಿ ಗವಾಯಿಗಳ ಜಯಂತಿ ಪ್ರಯುಕ್ತ ಗದುಗಿನ ಸಿದ್ದಲಿಂಗನಗರದ ಸ.ಪ್ರೌ.ಶಾಲೆಯ ಅಂಧ ಸಂಗೀತ ಶಿಕ್ಷಕರಾದ ನಾಗಪ್ಪ ಆರ್.ಶಿರೋಳ ಅವರನ್ನು ಸನ್ಮಾನಿಸಲಾಯಿತು. ಮುಖ್ಯ ಅತಿಥಿಗಳಾಗಿ ಪಿ.ಎಸ್. ಸಂಶಿಮಠ, ರಾಜು ಕುರಡಗಿ, ರಾಜಣ್ಣ ಗುಡಿಮನಿ ಉಪಸ್ಥಿತರಿದ್ದರು. ಸಂಗೀತ ಸೇವೆ ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನಡೆಸಿಕೊಟ್ಟರು. ಧಾರ್ಮಿಕ ಗ್ರಂಥ ಪಠಣವನ್ನು ಅಪೇಕ್ಷಾ ಎಚ್.ಹೊನಗಣ್ಣನವರ ಹಾಗೂ ವಚನ ಚಿಂತನವನ್ನು ಸೃಷ್ಟಿ ವಿ.ಪೂಜಾರ ಮಾಡಿದರು. ದಾಸೋಹ ಸೇವೆಯನ್ನು ಸದಾಶಿವಯ್ಯ ಸಂಗನಬಸವಯ್ಯ ಮದರಿಮಠ ಹಾಗೂ ಕುಟುಂಬ ವರ್ಗದವರು ವಹಿಸಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷರಾದ ಡಾ. ಉಮೇಶ ಪುರದ ಹಾಗೂ ವಿದ್ಯಾ ಪ್ರಭು ಗಂಜಿಹಾಳರವರು ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷರಾದ ಬಸವರಾಜ ಕಾಡಪ್ಪನವರ ಹಾಗೂ ಭಕ್ತರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಸಹ ಚೇರ್ಮನ್ ಶಿವಾನಂದ ಹೊಂಬಳ ಸ್ವಾಗತಿಸಿದರು. ಚೇರಮನ್ ಐ.ಬಿ. ಬೆನಕೊಪ್ಪ ಪರಿಚಯಿಸಿದರೆ, ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಉಪನ್ಯಾಸಕರಾಗಿ ಆಗಮಿಸಿದ ಗದುಗಿನ ಪಿಪಿಜಿ ಸಂಗೀತ ಮಹಾವಿದ್ಯಾಲಯದ ಪ್ರಾಚಾರ್ಯ ವಿ.ಎಂ. ಗುರುಮಠ ಮಾತನಾಡಿ, ಪುಟ್ಟರಾಜರು 75 ಗ್ರಂಥಗಳನ್ನು ಬರೆದಿದ್ದಾರೆ. ಅಂಧತ್ವವಿದ್ದರೂ ವಿಶೇಷ ಕಣ್ಣುಗಳಿಂದ ಸಮಾಜವನ್ನು ನೋಡಿ, ಜನರಲ್ಲಿ ಧಾರ್ಮಿಕ, ಆಧ್ಯಾತ್ಮಿಕ ಜಾಗೃತಿ ಮೂಡಿಸಿದರು. ಕನ್ನಡ ಸಂಸ್ಕೃತ, ಹಿಂದಿಯಲ್ಲಿ ಅನೇಕ ಗ್ರಂಥಗಳನ್ನು ಬರೆದರು.

ಅವರು ಪೀಠಾಧಿಪತಿಯಾದ ನಂತರ ವೀರೇಶ್ವರ ಪುಣ್ಯಾಶ್ರಮವನ್ನು ತುಂಬಾ ಎತ್ತರಕ್ಕೆ ಬೆಳೆಸಿದರು. ಪಂಚಾಕ್ಷರಿ ನಾಟ್ಯ ಸಂಘವನ್ನು ಸ್ಥಾಪಿಸಿದರು. ಅವರಲ್ಲಿ ಸಂಗೀತ ಅಭ್ಯಾಸ ಮಾಡಿದ ಅನೇಕರು ದೊಡ್ಡ ದೊಡ್ಡ ಸಂಗೀತ ಸಾಧನೆ ಮಾಡಿದ್ದಾರೆ. ಈ ಎಲ್ಲ ಅಂಧರಿಗೆ-ಅನಾಥರಿಗೆ ಆಶ್ರಯ ಕೊಡದೆ ಹೋಗಿದ್ದರೆ ಭಿಕ್ಷೆ ಬೇಡಿ ಬದುಕು ಕಟ್ಟಿಕೊಳ್ಳಬೇಕಾಗುತ್ತಿತ್ತು. ಆದರೆ ಪುಟ್ಟರಾಜರು ಅವರಿಗೆ ಸಂಗೀತ ವಿದ್ಯೆ ಕಲಿಸಿ ಸಮಾಜದಲ್ಲಿ ಉತ್ತಮ ಬದುಕು ಕಟ್ಟಿಕೊಟ್ಟರು ಎಂದರು.

## ಒಳ ಮೀಸಲಾತಿ ಜಾರಿಗೆಗೊಳಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಒಳಮೀಸಲಾತಿ ಹೋರಾಟಗಾರರ ಮೇಲಿನ ಪ್ರಕರಣವನ್ನು ಹಿಂಪಡೆದು ಒಳಮೀಸಲಾತಿ ಜಾರಿಗೊಳಿಸಿ ಸಾಮಾಜಿಕ ನ್ಯಾಯ ಕಲ್ಪಿಸಬೇಕೆಂದು ಮಾದಿಗ ಸಮಾಜದ ಯುವ ಮುಖಂಡ ಹಾಗೂ ಚಿಂಚಲಿ ಗ್ರಾಂ.ಪಂ ಸದಸ್ಯ ಚಂದ್ರಶೇಖರ್ ಆರ್.ಹರಿಜನ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಿಎಂ ಸಿದ್ದರಾಮಯ್ಯನವರ ಬಜೆಟ್ ಮಂಡನೆ ವೇಳೆ ಒಳ ಮೀಸಲಾತಿ ಹೋರಾಟಗಾರರು ಘೋಷಣೆ ಕೂಗುಬಾರದಿತ್ತು. ಆದರೆ, ಸಮಾಜ ಬಾಂಧವರ ತಾಳ್ಮೆಯ ಕಟ್ಟೆ ಒಡೆದು ಹೋಗಿದೆ.



ಈ ವಿಷಯವಾಗಿ ಕೆಲವರು ಪ್ರಾಣ ಕಳೆದುಕೊಂಡಿದ್ದಾರೆ. ಕಳೆದ ಮೂರು ದಶಕಗಳಿಂದ ಮಾದಿಗರಿಗೆ ಒಳ ಮೀಸಲಾತಿ ಕೊಡುತ್ತೇವೆ ಎಂದು ಮೂಗಿಗೆ ತುಪ್ಪ ಸವರಿದರೇ ಹೊರತು ಯಾರೂ ಮೀಸಲಾತಿ ಕೊಡುತ್ತಿಲ್ಲ.

ಮತ್ತೊಂದೆಡೆ, ಅಂಬೇಡ್ಕರ್ ಅವರ ಆಶಯದಂತೆ ಬದುಕುತ್ತಿದ್ದೇವೆ ಎಂದು ಜಂಭ ಕೊಚ್ಚಿಕೊಳ್ಳುವ ಸಮಾಜದ ಸಚಿವರು, ನಾಯಕರು ಮಾದಿಗರನ್ನು ದಿನೇ ದಿನೇ ಶೋಷಣೆ ಮಾಡುತ್ತಿದ್ದಾರೆ. ಒಳ ಮೀಸಲಾತಿ ಜಾರಿಯನ್ನು ವಿರೋಧಿಸುತ್ತಿರುವುದು ಅಂಬೇಡ್ಕರ್ ಅವರ ಆಶಯಗಳಿಗೆ ವಿರುದ್ಧವಾದುದು. ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಒಳ ಮೀಸಲಾತಿ ಜಾರಿಗೊಳಿಸಿ ಮಾದಿಗ ಸಮುದಾಯಕ್ಕೆ ನ್ಯಾಯ ಒದಗಿಸಿ ಎಂದು ಅವರು ಆಗ್ರಹಿಸಿದ್ದಾರೆ.

## ಆರೋಗ್ಯ ಜಾಗೃತಿಗಾಗಿ ವಿಶೇಷ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಮಹಿಳಾ ಮೋರ್ಚಾ ವತಿಯಿಂದ 'ವಿಶ್ವ ಮಹಿಳಾ ದಿನ'ವನ್ನು ಆಚರಿಸಲಾಯಿತು.

ಬಿಜೆಪಿ ಗದಗ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷರಾದ ನಿರ್ಮಲಾ ಕೊಳ್ಳಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಜಿಲ್ಲೆಯ ಮಹಿಳೆಯರ ಆರ್ಥಿಕ ಸಬಲೀಕರಣ ಮತ್ತು ಆರೋಗ್ಯ ಜಾಗೃತಿಗಾಗಿ ಒಂದು ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲು ನಾವು ಉದ್ದೇಶಿಸಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ಕೇಂದ್ರ ಸರ್ಕಾರದಿಂದ ಆರ್ಥಿಕ ಸಬಲೀಕರಣ ಯೋಜನೆ, ಮುದ್ರಾ ಯೋಜನೆ, ಜನ್ ಧನ್ ಯೋಜನೆ, ಸ್ಟಾರ್ಟ್ ಅಪ್ ಇಂಡಿಯಾ, ಪ್ರಧಾನ ಮಂತ್ರಿ ಉದ್ಯೋಗ ಸೃಷ್ಟಿ ಕಾರ್ಯಕ್ರಮ (PMEGP), ಸ್ವಸಹಾಯ ಸಂಘಗಳ ಆರ್ಥಿಕ ನೆರವು ಇತ್ಯಾದಿ ಹಲವಾರು ಯೋಜನೆಗಳ ಕುರಿತು ಮಾಹಿತಿ ನೀಡಿದರು.




ಡಾ. ರೇಖಾ ಕೊರ್ಲಹಳ್ಳಿ, ಜಯಶ್ರೀ ಹಿರೇಮಠ ಮುಂತಾದವರು ಮಾತನಾಡಿದರು. ಈ ಸಂದರ್ಭದಲ್ಲಿ ಪಕ್ಷದ ಹಿರಿಯರಾದ ಎಂ.ಎಸ್. ಕರೀಗೌಡ್ರ, ಜಯಶ್ರೀ ಉಗಲಾಟದ, ಶಾರದಾ ಸಜ್ಜನರ, ಅಶ್ವಿನಿ ಜಗತಾಪ, ಡಾ. ಕಮಲಾಕ್ಷೀ ಅಂಗಡಿ, ಮಹಿಳಾ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಉಮಾ ಕಲ್ಲನಗೌಡ್ರ, ಅಕ್ಕಮ್ಮ ವಸ್ತ್ರದ, ಕಸ್ತೂರಿ ಕಮ್ಮಾರ, ಪದ್ಮಿನಿ ಮುತ್ತಲದಿನ್ನಿ, ಸುಮಂಗಲಾ ಕೊನೆವಾಲ, ಪ್ರಭಾವತಿ ಬೆಳವಣಕಿ, ಯೋಗೇಶ್ವರಿ ಭಾವಿಕಟ್ಟಿ, ಮಹಾಲಕ್ಷ್ಮೀ ಜೂಜಗಾರ, ಸುಂದರಬಾಯಿ ಧರ್ಮದಾಸ, ಶಿವಾನಿ ಹಿರೇಮಠ, ಗೌರಿ ನಡುವಿನಹಳ್ಳಿ, ಪುಷ್ಪಾ ಚುಳಕಿ, ಪೂಜಾ ರಾಂಪೂರ, ಪ್ರಿಯಾಂಕಾ ಲಮಾಣಿ, ಪ್ರಜ್ಞಾ ಹೂಗಾರ, ಉಮಾ, ಐಶ್ವರ್ಯ, ಕಾವ್ಯ ಬೈರವಾಡೆ, ವಿಜಯಲಕ್ಷ್ಮೀ ಬೈರವಾಡೆ, ಶ್ವೇತಾ ಶ್ರೀದೇವಿ ಬೆಳದಡಿ ಮುಂತಾದವರಿದ್ದರು.

ಗದಗ ನಗರ ಮಂಡಲ ಪ್ರಧಾನ ಕಾರ್ಯದರ್ಶಿ ಸ್ವಾತಿ ಅಕ್ಕಿ ನಿರೂಪಿಸಿದರು, ಕವಿತಾ ಬಂಗಾರಿ ವಂದಿಸಿದರು.

# ಮಹಿಳೆಯನ್ನು ಗೌರವಿಸಿ, ಪೂಜಿಸಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಹಿಳೆಯನ್ನು ನಮ್ಮ ಧರ್ಮ, ಸಂಸ್ಕೃತಿಯಲ್ಲಿ ದೇವರೆಂದು ಪೂಜಿಸುತ್ತೇವೆ. ಪುರುಷ ದೇವರಿಗಿಂತ ಸ್ತ್ರೀ ದೇವತೆ ಶಕ್ತಿವಂತಳೆಂದೂ ಗುರುತಿಸಿದ್ದೇವೆ. ತಾಯಿಯಾಗಿ, ಸೋದರಿಯಾಗಿ, ಮಡದಿಯಾಗಿ ಮನುಕುಲವನ್ನು ಪೊರೆಯುವ ಆಕೆಯ ಶಕ್ತಿ ಸದಾ ಕಾಲ ಈ ಜಗತ್ತನ್ನು ಕಾಪಾಡುತ್ತದೆ. ಹೀಗಾಗಿಯೇ ಮಹಿಳೆಯರು ಜಗದ ಕಣ್ಣು ಎಂದು ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ-1ರಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.



ಪುರುಷರ ಯಶಸ್ಸಿನ ಹಿಂದೆ ಮಹಿಳೆ ಇರುತ್ತಾಳೆಂಬುದು ಅಷ್ಟೇ ಸತ್ಯ. 12ನೇ ಶತಮಾನದಲ್ಲಿ ಬಸವಣ್ಣನವರು ಮಹಿಳೆಗೆ ಸ್ವಾತಂತ್ರ್ಯ ಕೊಟ್ಟಿದ್ದು, ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಮಹಿಳೆಗೆ ಸಮಾನತೆಯ ಹಕ್ಕು ನೀಡುವ ಮೂಲಕ ಇಂದಿನ ಆಧುನಿಕ ಯುಗದಲ್ಲಿ ಪ್ರತಿಯೊಂದು ಕ್ಷೇತ್ರದಲ್ಲಿ ಮಹಿಳೆ ತನ್ನ ಛಾಪನ್ನು ಮೂಡಿಸುತ್ತಿದ್ದಾಳೆ. ಮಹಿಳೆಯನ್ನು ಗೌರವಿಸಿ ಪೂಜಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಸಹ ಶಿಕ್ಷಕರಾದ ಎಂ.ಎಂ. ಮೇಗಲಮನಿ, ಎಂ.ಎಂ. ಕೊಪ್ಪಳ, ಕೆ.ಎಂ. ಹೆರಕಲ್, ಮಂಜುನಾಥ ಕಲ್ಯಾಣಮಠ, ಎಚ್.ಆರ್. ಭಜೆಂತ್ರಿ, ಎಸ್.ಎಚ್. ಉಪ್ಪಾರ, ಎಸ್.ವಿ. ಹಿರೇಮಠ, ವಿ.ಎಂ. ಕಂಠಿ, ಟಿ.ವೀಣಾ, ಎಸ್.ಡಿ. ಪಂಡಿತ, ನಂದಾ ಮಟ್ಟಿ, ಜ್ಯೋತಿ ಜಾಧವ, ಪವಿತ್ರಾ ಮಟ್ಟಿ, ರೇಣುಕಾ ಪರ್ವತಗೌಡರ, ಅಡುಗೆ ಸಿಬ್ಬಂದಿ ಸಂಕವ್ವಾ ಯಳವತ್ತಿ, ಮಾಬುಬ್ಬಿ ಹೊಸೂರ, ಲಕ್ಷ್ಮೀ ಬೆಂದ್ರೆ, ರೇಣುಕಾ ಬಗಾಡೆ ಇದ್ದರು.

## ಮಹಿಳಾ ದಿನಾಚರಣೆ ನಿಮಿತ್ತ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾ ಮಹಿಳಾ ಅಧ್ಯಕ್ಷೆ ಮಮತಾಜ ಕಟ್ಟಿಮನಿ ಹಾಗೂ ಗದಗ ಜಿಲ್ಲಾಧ್ಯಕ್ಷ ಎಮ್.ಎ. ಕುರ್ತಕೋಟಿ ಅವರ ನೇತೃತ್ವದಲ್ಲಿ ಸಾಧಕ ಮಹಿಳೆಯರನ್ನು ಬೆಟಗೇರಿಯ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆ ನಂ-6ರಲ್ಲಿ ಸನ್ಮಾನಿಸಲಾಯಿತು.

ಪ್ರಧಾನ ಗುರುಮಾತೆ ವಿ.ಕೆ. ಮುತಾಲಿಕ ದೇಸಾಯಿ, ಸಹ ಶಿಕ್ಷಕಿಯರಾದ ಎಸ್.ಎಮ್. ಹಳೇಮನಿ, ಎಸ್.ಎಮ್. ಕರಡಕಲ್ಲ, ವಾಯ್.ಎಚ್. ಹಡಪದ, ಎಸ್.ಎಸ್. ವನಹಳ್ಳಿ, ಎ.ಎಚ್. ಚಿಗರಿ, ಎಮ್.ಎಸ್. ತೊಂಡಿಹಾಳ, ಎಸ್.ಬಿ. ಇಟಗಿ ಇವರನ್ನು ವೇದಿಕೆಯ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ರೋಣ ತಾಲೂಕಾ ಮಹಿಳಾ ಘಟಕದ ಅಧ್ಯಕ್ಷೆ ಸುವರ್ಣ ತೋಟಗೇರ, ಮೇರಿ ಕಾರಭಾರಿ, ನವೀದಾ ಕುರ್ತಕೋಟಿ, ಯಾಸ್ಮಿನ ಕಟ್ಟಿಮನಿ, ಶಾಹೀನ ಕುರ್ತಕೋಟಿ, ರಾಧೆ ಕಾರಭಾರಿ ಹಾಗೂ ಸ್ವಾಭಿಮಾನಿ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಹಿಳೆಗೆ ಉನ್ನತ ಸ್ಥಾನಮಾನವಿದೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ಭಾರತೀಯ ಪರಂಪರೆಯಲ್ಲಿ ಮಹಿಳೆಯರಿಗೆ ಉನ್ನತವಾದ ಸ್ಥಾನ-ಮಾನ ನೀಡಲಾಗಿದೆ ಎಂದು ಡಂಬಳ ಗ್ರಾ.ಪಂ ಅಧ್ಯಕ್ಷೆ ಶಿವಲೀಲಾ ದೇವಪ್ಪ ಬಂಡಿಹಾಳ ಹೇಳಿದರು.

ಇಲ್ಲಿನ ಗ್ರಾ.ಪಂ ಆವರಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಹೆಣ್ಣು ಅಬಲೆಯಲ್ಲ, ಸಬಲೆ ಎಂಬುದನ್ನು ಯಾರೂ ಮರೆಯಬಾರದು. ಪ್ರತಿಯೊಬ್ಬ ಯಶಸ್ವಿ ಪುರುಷನ ಹಿಂದೆ ಮಹಿಳೆ ಇದ್ದಾಳೆ ಎಂಬುದನ್ನು ಇತಿಹಾಸದ ಪುಟಗಳನ್ನು ತೆ-ಗೆದಾಗ ಅರಿಯಬಹುದಾಗಿದೆ.




ಇಂದಿನ ಆಧುನಿಕ ವ್ಯವಸ್ಥೆಯಲ್ಲಿ ಮಹಿಳೆಯರು ಗಡಿ ಕಾಯುವ ಸೈನಿಕ ಹುದ್ದೆಯಿಂದ ಹಿಡಿದು ವಿಮಾನ ಹಾರಿಸುವ ಪೈಲಟ್ ಷ್ಟೇ ಅಲ್ಲದೆ, ದೇಶದ ರಾಷ್ಟ್ರಪತಿಂಯಾಗಿಂಯೂ ಸಮರ್ಥವಾಗಿ ಕಾರ್ಯನಿರ್ವಹಣೆ ಮಾಡುತ್ತಿದ್ದಾರೆ ಎಂದು ಹೇಳಿದರು.

ಗ್ರಾ.ಪಂ ಪಿಡಿಓ ಲತಾ ಮಾನೆ ಮಾತನಾಡಿ, ಜಗತ್ತಿನ ಜನಸಂಖ್ಯೆಯಲ್ಲಿ ಅರ್ಧದಷ್ಟು ಮಹಿಳೆಯರಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಿರುವ ಮಹಿಳೆಯರು ಯಾವುದೇ ಫಲಾಪೇಕ್ಷೆ ನಿರೀಕ್ಷಿಸುತ್ತಿಲ್ಲ. ವಿವಿಧ ಕ್ಷೇತ್ರಗಳಲ್ಲಿನ ಸಾಧಕಿಯರು ಮಹಿಳಾ ಸಮುದಾಯಕ್ಕೆ ಮಾದರಿಯಾಗಬೇಕು ಎಂದು ಹೇಳಿದರು.

ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ರಂಗೋಲಿ, ಮ್ಯೂಸಿಕಲ್ ಚೇರ್ ಸ್ಪರ್ಧೆ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮದಲ್ಲಿ ಡಂಬಳ ಗ್ರಾ.ಪಂ ಉಪಾಧ್ಯಕ್ಷೆ ಲಕ್ಷ್ಮವ್ವ ಕಾಶಭೋವಿ, ಅಂಗನವಾಡಿ ನೌಕರರ ಸಂಘದ ತಾಲೂಕಾಧ್ಯಕ್ಷೆ ಸುಶೀಲಾ ಚಲವಾದಿ, ಗ್ರಾ.ಪಂ ಸದಸ್ಯೆ ಶೇಕವ್ವ ಪಲ್ಲೇದ, ಯಲ್ಲಮ್ಮ ಬಂಡಿ, ಜ್ಯೋತಿ ಪರಡ್ಡಿ, ನಂಜಪ್ಪನವರ, ಲಲಿತಾ ಜೊಂಡಿ, ಶೋಭಾ ತಳಗೇರಿ, ಮಂಗಳಾ ಸಣ್ಣಪ್ಯಾಟಿ, ವಿಜಯಲಕ್ಷೀ ಗುರುವಿನ, ಸ್ವ-ಸಹಾಯ ಸಂಘದ ಸದಸ್ಯರು, ಗ್ರಾ.ಪಂ ಸದಸ್ಯರು ಇದ್ದರು.



ಗದಗ ಜಿಲ್ಲಾ ಬ್ರಾಹ್ಮಣ ಸಂಘದ ವತಿಯಿಂದ ಹನುಮಾನ್ ಚಾಲೀಸಾ ಪಠಣ ಕಾರ್ಯಕ್ರಮದ ಪೂರ್ವಭಾವಿಯಾಗಿ ಹಳೆ ಡಿ.ಸಿ. ಆಫೀಸ್‌ನಿಂದ ಶಂಕರ ಮಠದವರಗೆ ಭವ್ಯ ಶೋಭಾಯಾತ್ರೆ ನೆರವೇರಿತು. ಶೋಭಾಯಾತ್ರೆಯಲ್ಲಿ ನೂರಾರು ಸುಮಂಗಲೆಯರು ಪೂರ್ಣಕುಂಭ ಹೊತ್ತು ಸಾಗಿದರು.

## ಸೋಶಿಯಲ್ ಮೀಡಿಯಾ ವಿದ್ಯಾರ್ಥಿ ಜೀವನಕ್ಕೆ ಅನಗತ್ಯ

▶▶ ಮೊದಲನೇ ಪುಟದಿಂದ

ಫೇಸ್‌ಬುಕ್ ಖಾತೆಯ ಮಾಹಿತಿಯ ಮೂಲಕ ನಿಮ್ಮ ಚಲನವಲನಗಳನ್ನು ಗಮನಿಸಿ ನಿಮ್ಮ ಮನೆ ಲೂಟಿ ಮಾಡುತ್ತಾರೆ. ಸೈಬರ್ ವಂಚಕರಿಂದ ಎಚ್ಚರವಾಗಿರಬೇಕಾದರೆ ನಿಮ್ಮ ಕುಟುಂಬದ ವಿಚಾರಗಳ ಪೋಸ್ಟ್ ಹಾಕಬಾರದು. ಎಪಿಕೆ ಲಿಂಕನ್ನು ಎಂದಿಗೂ ಡೌನ್‌ಲೋಡ್ ಮಾಡಬೇಡಿ. ಹೀಗೆ ಮಾಡಿದರೆ ಮಾಡಿದರೆ ನಿಮ್ಮ ಸಂಪೂರ್ಣ ಮೊಬೈಲ್ ಡಾಟಾ ಸೈಬರ್ ವಂಚಕರ ಕೈಸೇರುತ್ತದೆ. ವಿದ್ಯಾರ್ಥಿನಿಯರು ನಿಮ್ಮ ಫೋಟೊಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಕಬಾರದು ಎಂದು ಎಚ್ಚರಿಕೆ ಹೇಳಿದರು.

ಪ್ರಾಂಶುಪಾಲ ಎಮ್.ಯು. ಹಿರೇಮಠ ಮಾತನಾಡಿ, ಸಂಸ್ಕಾರ, ಸಂಸ್ಕೃತಿಯ ಬದುಕನ್ನು ಕಟ್ಟಿಕೊಡುವ ಪ್ರತಿಯೊಬ್ಬ ಮಹಿಳೆಯರಿಗೆ ಮತ್ತು ಮನೆಯಲ್ಲಿರುವ ಮಹಿಳೆಯರಿಗೂ ನಾವು ನೀವೆಲ್ಲರೂ ಗೌರಯುತವಾಗಿ ನಡೆದುಕೊಂಡರೆ ಉತ್ತಮ ಕುಟುಂಬ, ಉತ್ತಮ ಸಮಾಜ ನಿರ್ಮಾಣವಾಗಲಿದೆ ಎಂದು ಹೇಳಿದರು.

ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ಪ್ರೀತಿ ಶಿವಪ್ಪನಮಠ ಮಾತನಾಡಿ, ಸಂವಿಧಾನದಲ್ಲಿ ಮತ್ತು ಭಾರತ ದೇಶದುದ್ದಕ್ಕೂ ಭಾರತೀಯ ಪರಂಪರೆಯಂತೆ ಮಹಿಳೆಯರಿಗೆ ಉತ್ತಮ ಗೌರವಯುತ ಸ್ಥಾನವನ್ನು ನೀಡಿರುವ ದೇಶ ನಮ್ಮದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ಯಾಜೆಟೆಡ್ ಮ್ಯಾನೇಜರ್ ಬಿ.ಎಫ್. ಕರಬುಡ್ಡಿ, ಡಾ. ಪ್ರಕಾಶ ದೇಶಪಾಂಡೆ, ಐಕ್ಯೂಎಸಿ ಸಂಯೋಜಕರಾದ ಪ್ರೊ. ಸತ್ತಾರ ಬಡೇಖಾನ್ನವರ, ಪ್ರೊ. ಪ್ರಕಾಶ ಕರಿಗಾರ, ಪ್ರೊ. ಎಸ್.ಯು. ಸಜ್ಜನಶೆಟ್ಟರ, ಡಾ. ಎಸ್.ಕೆ. ಪೂಜಾರ, ಪ್ರೊ. ಮಹಾಲಕ್ಷ್ಮೀ ಹುಟಗಿ, ಪ್ರೊ. ರೂಪಾ ಶ್ರೀನಿವಾಸ, ಪ್ರೊ. ಮಹಬೂಬಆರೀಫ ಸದರಸೋಪವಾಲೆ, ಪ್ರೊ. ಸತೀಶ ಸರ್ವಿ, ಪ್ರೊ. ದ್ಯಾಮಣ್ಣ ಮನಿಕಟ್ಟಿ, ಪ್ರೊ. ರಿಯಾಜಅಹ್ಮದ ದೊಡ್ಡಮನಿ, ಪ್ರೊ. ಪ್ರತಿಭಾ ಚವ್ಹಾಣ, ಪ್ರೊ. ಸುಮಿತ್ರಾ ಮೇದಾರ, ಪ್ರೊ. ವಹಿದಾ ಕಿಲ್ಲೆದಾರ, ಲಕ್ಷ್ಮೀ ನಾಗರಾಳ, ಶ್ರೀದೇವಿ, ಇನ್ನರ್‌ವ್ಹೀಲ್ ಕ್ಲಬ್‌ನ ಸದಸ್ಯರು, ವಿದ್ಯಾರ್ಥಿನಿಯರು ಇದ್ದರು.

### ಅಲ್ಪಾವಧಿ ಕೋರ್ಸ್‌ಗಳ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿದ ಸಂಜಯ ಶೆಟ್ಟಣ್ಣವರ ಅಭಿಮತ

# ಕೌಶಲ್ಯದ ಕೊರತೆಯಿಂದ ನಿರುದ್ಯೋಗ ಸಮಸ್ಯೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಷ್ಟೇ ಅಲ್ಲದೆ ದೇಶದಾದ್ಯಂತ ನಿರುದ್ಯೋಗ ಸಮಸ್ಯೆ ಕಾಡುತ್ತಿದೆ. ಪದವಿ ಪಡೆದವರು, ಇಂಜಿನಿಯರಿಂಗ್ ವಿದ್ಯಾರ್ಥಿಗಳು ಸಹ ಉದ್ಯೋಗವಿಲ್ಲದೆ ಪರದಾಡುತ್ತಿದ್ದಾರೆ. ಇದಕ್ಕೆ ಕೌಶಲ್ಯದ ಕೊರತೆ ಮುಖ್ಯ ಕಾರಣವಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಸಂಜಯ ಶೆಟ್ಟಣ್ಣವರ ಹೇಳಿದರು.

ಅವರು ನಗರದ ಕನಕ ಭವನದಲ್ಲಿ ಶನಿವಾರ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ಸಂಯುಕ್ತಾಶ್ರಯದಲ್ಲಿ 'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ' ಯೋಜನೆಯಡಿ ಅಲ್ಪಾವಧಿ ಕೋರ್ಸ್‌ಗಳ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕೌಶಲ್ಯದ ಕೊರತೆಯಿಂದಾಗಿ ಲಕ್ಷಾಂತರ ವಿದ್ಯಾರ್ಥಿಗಳು ನಿರುದ್ಯೋಗಿಗಳಾಗಿದ್ದಾರೆ. ಇವರಲ್ಲಿ ಹಿಂದುಳಿದ ವರ್ಗದವರು, ದಲಿತರು, ಶೋಷಿತರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಇವರಿಗೆ ಕೌಶಲ್ಯ ತರಬೇತಿ ನೀಡುವ ಮೂಲಕ ಸ್ವಾವಲಂಬಿ ಬದುಕು ನಡೆಸಲು ಮಾರ್ಗದರ್ಶನ ನೀಡುವ ನಿಟ್ಟಿನಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತದೆ.



ಯುವಕ-ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಕೌಶಲ್ಯ ತರಬೇತಿಯನ್ನು ಪಡೆದು ಸ್ವಉದ್ಯೋಗವನ್ನು ಆರಂಭಿಸಿ ಸ್ವಾವಲಂಬಿಗಳಾಗಬೇಕು ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಮಾತನಾಡಿ, ಸರ್ಕಾರ ಸಾಕಷ್ಟು ಸೌಲಭ್ಯಗಳನ್ನು ನೀಡುತ್ತಿದೆ. ಅವುಗಳನ್ನು ಸದುಪಯೋಗ ಪಡೆದುಕೊಂಡು ಯೋಜನೆಗಳನ್ನು ಸಾರ್ಥಕಪಡಿಸಿಕೊಳ್ಳಬೇಕು. ಪ್ರತಿಯೊಬ್ಬರೂ ಉದ್ಯೋಗದಲ್ಲಿ ತೊಡಗಿಸಿಕೊಂಡರೆ ಸ್ವಾವಲಂಬಿಯಾಗಿ ಬದುಕಲು ಸಾಧ್ಯವಾಗುತ್ತದೆ. ದಿನನಿತ್ಯದ ಜೀವನದಲ್ಲಿ ಹಾಸುಹೊಕ್ಕಿರುವ ಕೌಶಲ್ಯಗಳನ್ನು ಅಳವಡಿಸಿಕೊಳ್ಳುವದರ ಮೂಲಕ ಈ ತರಬೇತಿಯನ್ನು ಪಡೆದು ಸ್ವ ಉದ್ಯೋಗ ಆರಂಭಿಸಬೇಕು ಎಂದು ಹೇಳಿದರು.

ಗದಗ ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಫಕೀರಪ್ಪ ಹೆಬಸೂರ ಅಧ್ಯಕ್ಷತೆವಹಿಸಿ ಮಾತನಾಡಿ, ಸಂಘ-ಸಂಸ್ಥೆಗಳು ಬೆಳೆಯಲು ಅಧಿಕಾರಿಗಳ ಸಹಕಾರ ಅಗತ್ಯವಾಗಿದೆ. ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕೊಡುಗೆ ಗಣನೀಯವಾಗಿದೆ ಎಂದರು.

ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ಪ್ರಧಾನ ಕಾರ್ಯದರ್ಶಿ ಶಶಿಧರ ರೊಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ತರಬೇತಿ ಸಾಮಾಗ್ರಿ ಸಲಕರಣೆಗಳ ಕಿಟ್‌ಗಳನ್ನು ಫಲಾನುಭವಿಗಳಿಗೆ ವಿತರಿಸಲಾಯಿತು. ವೇದಿಕೆ ಮೇಲೆ ದೇವರಾಜ ಅರಸು ಅಭಿವೃದ್ಧಿ ನಿಗಮದ ಪ್ರಧಾನ ವ್ಯವಸ್ಥಾಪಕರಾದ ಟಿ. ಶ್ರೀನಿವಾಸಕುಮಾರ, ಮಡಿವಾಳ/ಸವಿತಾ/ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶ ಮಲ್ಲಿಕಾರ್ಜುನ ಮಠದ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಬಸವರಾಜ ಮಲ್ಲೂರ, ರಾಕೇಶ ಸಿದ್ದರಾಮಯ್ಯ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಯ ಆಡಳಿತಾಧಿಕಾರಿ ರಾಮಕೃಷ್ಣ ರೊಳ್ಳಿ, ಸಂಸ್ಥೆಯ ಪದಾಧಿಕಾರಿಗಳಾದ ಬಿ.ಬಿ. ಬಾವಿಕಟ್ಟಿ, ಎಸ್.ಎಸ್. ಕರಡಿ, ಕೆ.ಬಿ. ಕಂಬಳಿ, ಆರ್.ಎಂ. ನಿಂಬನಾಯ್ಕರ, ಎಸ್.ಡಿ. ಸಿಂಗಟಾಲಕೇರಿ, ಬಿ.ಎಚ್. ಹ್ಯಾಟಿ ಮುಂತಾದವರು ಉಪಸ್ಥಿತರಿದ್ದರು.

ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ಕಾರ್ಯದರ್ಶಿ ವೈ.ಬಿ. ಬಾನಾಪುರ ಸ್ವಾಗತಿಸಿದರು. ಬಸವರಾಜ ಲದ್ದಿ ಕಾರ್ಯಕ್ರಮ ನಿರೂಪಿಸಿದರು. ರಾಕೇಶ ಸಿದ್ದರಾಮಯ್ಯ ಐಟಿಐ ಕಾಲೇಜಿನ ಪ್ರಾಚಾರ್ಯ ರಮೇಶ ವಡವಿ ವಂದಿಸಿದರು.

ದೇವರಾಜು ಅರಸು ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಕಾಂತರಾಜು ಮಾತನಾಡಿ, ಸ್ವಾತಂತ್ರ್ಯಾನಂತರದಲ್ಲಿ ಆಹಾರ ಮತ್ತು ವಸತಿಗೆ ಗಂಭೀರವಾದ ಸಮಸ್ಯೆಗಳಿದ್ದವು. ನಂತರ ಹಸಿರು ಕ್ರಾಂತಿಯಿಂದ ಹಂತ ಹಂತವಾಗಿ ಸಮಸ್ಯೆಗಳು ಕಡಿಮೆಯಾಗುತ್ತಾ ಬಂದಿದ್ದರೂ ಇಂದಿನ ದಿನಗಳಲ್ಲಿ ಉದ್ಯೋಗ ಸೃಷ್ಟಿ ತೀವ್ರ ಸ್ವರೂಪ ಪಡೆಯುತ್ತಿದ್ದು, ಈ ಬಗ್ಗೆ ಸರ್ಕಾರ ಗಂಭೀರ ಚಿಂತನೆಗಳನ್ನು ನಡೆಸಿದೆ. ನಿಗಮದಿಂದ ಹಲವಾರು ಯೋಜನೆಗಳ ಮೂಲಕ ನೂರಾರು ಕೋಟಿಗಳ ಅನುದಾನ ನೀಡುತ್ತಿದೆ. ಅಲ್ಲದೆ, ಸರ್ಕಾರವು 68 ವಿವಿಧ ಕ್ಷೇತ್ರದಲ್ಲಿ ಕೌಶಲ್ಯ ತರಬೇತಿ ನೀಡುವ ಚಿಂತನೆ ನಡೆಸಿದೆ ಎಂದು ಹೇಳಿದರು.

# ಕಂದಾಯ ಸಭಾಭವನ ನಿರ್ಮಾಣಕ್ಕೆ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ಕಂದಾಯ ಇಲಾಖೆ ವತಿಯಿಂದ ಬಿಡುಗಡೆಯಾಗಿದ್ದ 25 ಲಕ್ಷ ರೂ ವೆಚ್ಚದ ಕಂದಾಯ ಸಭಾಭವನ ನಿರ್ಮಾಣಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಶನಿವಾರ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ಈಗಿರುವ ಸಭಾಭವನ ಇಕ್ಕಟ್ಟಾಗಿದ್ದು , ಸಭೆಗಳನ್ನು ನಡೆಸಲು ತೊಂದರೆಯಾಗುತ್ತಿತ್ತು.

ಈ ಬಗ್ಗೆ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿದ ಸಂದರ್ಭದಲ್ಲಿ ವರದಿಯನ್ನು ಸಲ್ಲಿಸಲಾಗಿತ್ತು. ಅದರಂತೆ ಇದೀಗ 25 ಲಕ್ಷ ರೂ ಅನುದಾನ ಬಿಡುಗಡೆಯಾಗಿದ್ದು, ಸಂಕೀರ್ಣದ ಮೊದಲನೇ ಮಹಡಿಯಲ್ಲಿ ಸುಸಜ್ಜಿತವಾದ ಸಭಾಭವನ ನಿರ್ಮಾಣ ಮಾಡಲಾಗುವುದು. ನಂತರ ಅದಕ್ಕೆ ಅಗತ್ಯವಿರುವ ಪೀಠೋಪಕರಣಕ್ಕಾಗಿ ಶಾಸಕರ ನಿಧಿಯಿಂದ ಅನುದಾನ ಒದಗಿಸಲಾಗುವುದು ಎಂದರು.


ತಹಸೀಲ್ದಾರ ಅನಿಲ ಬಡಿಗೇರ, ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಸದಸ್ಯರಾದ ಸಂದೀಪ ಕಪ್ಪತ್ತನವರ, ಫಕ್ಕೀರೇಶ ರಟ್ಟಿಹಳ್ಳಿ, ಮಾರ್ತಾಂಡಪ್ಪ ಹಾದಿಮನಿ, ಶರಣಪ್ಪ ಹರ್ಲಾಪೂರ, ಬಸವರಾಜ ಪೂಜಾರ, ಕಂದಾಯ ನಿರೀಕ್ಷಕ ಬಿ.ಎಸ್. ಕಾತ್ರಾಳ, ನಿರ್ಮಿತಿ ಕೇಂದ್ರದ ವಿಜಯ ಯಳಮಲಿ ಮುಂತಾದವರು ಉಪಸ್ಥಿತರಿದ್ದರು.

# ಲಲಿತಾ ಕೆರಿಮನಿಯವರಿಗೆ ರಾಣಿ ಚನ್ನಮ್ಮ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಶನಿವಾರ ಜರುಗಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಇಲ್ಲಿನ ಹಿರಿಯ ಸಾಹಿತಿ ಲಲಿತಾ ಸಿ.ಕೆರಿಮನಿ ಅವರಿಗೆ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿ-2025 ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ವಿವಿಧ ಕ್ಷೇತ್ರಗಳಲ್ಲಿ




ಸಾಧನೆಗೈದ ಮಹಿಳೆಯರಿಗೆ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿ, ಸ್ತ್ರೀ ಶಕ್ತಿ ಗುಂಪು ಹಾಗೂ ಒಕ್ಕೂಟಗಳಿಗೆ ಪ್ರಶಸ್ತಿ ಪ್ರದಾನ ಮಾಡಿದರು.

ಲಲಿತಾ ಕೆರಿಮನಿ ಅವರು ಮೂರು ದಶಕಗಳಿಗೂ ಅಧಿಕ ಕಾಲ ಶಿಕ್ಷಕಿಯಾಗಿ ಸೇವೆ ಸಲ್ಲಿಸಿ, ಸಮಾಜ ಸೇವೆ, ಶಿಕ್ಷಣ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ತಮ್ಮದೇ ಆದ ಸಾಧನೆ ಮಾಡಿದ್ದು, ಸಮಾಜ ಸೇವೆಯಲ್ಲಿಯೂ ವಿಶಿಷ್ಟ ಕಾರ್ಯ ಮಾಡುತ್ತಿದ್ದಾರೆ. ಹಲವಾರು ಸಂಘ-ಸಂಸ್ಥೆಗಳಿಗೆ ಮಾರ್ಗದರ್ಶಕರಾಗಿ, ಮಹಿಳಾ ಸಂಘಗಳಿಗೆ ಮುಂಚೂಣಿಯಲ್ಲಿ ಸೇವೆ ಸಲ್ಲಿಸುತ್ತಿರುವ ಇವರು ಮಕ್ಕಳು ಸಹ ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಹೆಸರು ಮಾಡುತ್ತಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಶಾಸಕ ಡಾ. ಉದಯ ಗರುಡಾಚಾರ್, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪದ್ಮಾವತಿ, ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ, ಮಾಜಿ ಶಾಸಕಿ ಸೌಮ್ಯ ರೆಡ್ಡಿ, ಇಲಾಖೆಯ ಕಾರ್ಯದರ್ಶಿ ಡಾ. ಶಮ್ಲ ಇಕ್ಬಾಲ್, ನಿರ್ದೇಶಕರಾದ ರಾಘವೇಂದ್ರ. ಟಿ, ವ್ಯವಸ್ಥಾಪಕ ನಿರ್ದೇಶಕಿ ಪುಷ್ಪಲತಾ ಮತ್ತಿತರರು ಉಪಸ್ಥಿತರಿದ್ದರು.

ಹಿರಿಯ ಸಾಹಿತಿ ಲಲಿತಾ ಕೆರಿಮನಿಯವರು ರಾಜ್ಯಮಟ್ಟದ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿಗೆ ಪುರಸ್ಕೃತರಾದ ಹಿನ್ನೆಲೆಯಲ್ಲಿ ಪಟ್ಟಣದ ಅನೇಕ ಮುಖಂಡರು, ಶಾಸಕರು, ಮಾಜಿ ಶಾಸಕರು, ಹಿರಿ-ಕಿರಿಯ ಸಾಹಿತಿಗಳು, ಅಭಿಮಾನಿಗಳು, ಅವರ ಶಿಷ್ಯರು ಅಭಿನಂದಿಸಿದ್ದಾರೆ.

### ಪವರ್ ಶೇರಿಂಗ್ ಚರ್ಚೆ ಬೆನ್ನಲ್ಲೇ ಡಿಕೆಶಿ, ಸಿದ್ದರಾಮಯ್ಯಗೆ ಖರ್ಗೆ ವಾರ್ನಿಂಗ್!

■ ವಿಜಯಸಾಕ್ಷಿ ಸುದ್ದಿ, ಕಲಬುರ್ಗಿ

ಕರ್ನಾಟಕದಲ್ಲಿ ಪವರ್ ಶೇರಿಂಗ್ ಚರ್ಚೆ ಜೋರಾಗಿ ನಡೆಯುತ್ತಿರುವ ಬೆನ್ನಲ್ಲೇ ಆಅಒ ಡಿಕೆಶಿ, ಸಿದ್ದರಾಮಯ್ಯಗೆ ಮಲ್ಲಿಕಾರ್ಜುನ ಖರ್ಗೆ ಖಡಕ್ ವಾರ್ನಿಂಗ್ ಕೊಟ್ಟಿದ್ದಾರೆ. ಸೀಟ್ ಫೈಟ್ ತೀವ್ರಗೊಂಡಿರುವ ಹೊತ್ತಲ್ಲೇ ಸಿಎಂ-ಡಿಸಿಎಂಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನೀಡಿರುವ ಸಂದೇಶ ಎಲ್ಲರ ಗಮನ ಸೆಳೆದಿದೆ.

# ಹೋಳಿ ಹಬ್ಬದ ಆಚರಣೆ ಶಾಂತಿಯುತವಾಗಿರಲಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹೋಳಿ ಹಬ್ಬಕ್ಕೆ ಭಾರತೀಯ ಪರಂಪರೆಯಲ್ಲಿ ವಿಶೇಷವಾದ ಸ್ಥಾನವಿದೆ. ಹೋಳಿ ಹಬ್ಬವನ್ನು ಶಾಂತಿ ಹಾಗೂ ಸೌಹಾರ್ದತೆಯಿಂದ ಆಚರಿಸಬೇಕು ಎಂದು ಮುಳಗುಂದ ಪೊಲೀಸ್ ಠಾಣೆಯ ಸಿಪಿಐ ಎಸ್.ವಿ. ಶಿವಯೋಗಿ ಹೇಳಿದರು.

ಅವರು ಪಟ್ಟಣದ ಪೊಲೀಸ್ ಠಾಣೆಯಲ್ಲಿ ಜರುಗಿದ ಹೋಳಿ ಹಬ್ಬದ ಶಾಂತಿ ಸಭೆಯನ್ನುದ್ದೇಶಿಸಿ ಮಾತನಾಡಿ, ಹೋಳಿ ಹಬ್ಬವನ್ನು ನಾಡಿನಾದ್ಯಂತ ಶಾಂತಿ-ಸೌಹಾರ್ದತೆಯಿಂದ ಆಚರಣೆ ಮಾಡಲಾಗುತ್ತಿದೆ.

ಈ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳು, ರಂಜಾನ್ ಹಬ್ಬ ಇರುವುದರಿಂದ ಎಲ್ಲರೂ ಸೌಹಾರ್ದ ಮನೋಭಾವನೆಯಿಂದ ಹಬ್ಬವನ್ನು ಆಚರಿಸಬೇಕು. ನಮ್ಮ ಪೊಲೀಸ್ ಇಲಾಖೆಯ ಸಹಾಯ-ಸಹಕಾರ ಇರುತ್ತದೆ ಎಂದರು.

ಸಭೆಯಲ್ಲಿ ಪಿಎಸ್‌ಐ ಡಿ.ಎಂ. ಮುಲ್ಲಾ, ಸುನೀಲ ಹುಗಾರಿ, ನಾಗರಾಜ ಸೌಳಭಾವಿ, ಗುಡ್ಡಣ್ಣವರ, ಪರಶುರಾಮ ದೊಡ್ಡಮನಿ, ರಮೇಶ ಮ್ಯಾಗೇರಿ, ಶ್ರೀಕಾಂತ ಸಿದ್ದನಗೌಡರ, ದೇವರಾಜ ಸಂಗನಪೇಟಿ ಮುಳಗುಂದ ವ್ಯಾಪ್ತಿಯ ಗ್ರಾಮದ ಸಾರ್ವಜನಿಕರು ಇದ್ದರು.

### ಮಾರ್ಚ್ ತಿಂಗಳ ಪಡಿತರ ವಿತರಣೆಯಲ್ಲಿ ಫೆಬ್ರುವರಿ-2025ರ ಅಕ್ಕಿ ಸೇರಿಸಿ ವಿತರಣೆ

# ಕಡಿಮೆ ಪಡಿತರ ವಿತರಿಸಿದರೆ ದೂರು ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳಿಗೆ (ಬಿಪಿಎಲ್) ಪ್ರತಿ ಫಲಾನುಭವಿಗಳಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ (ಎನ್‌ಎಫ್‌ಎಸ್‌ಎ) ವಿತರಿಸಲಾಗುವ 5 ಕೆ.ಜಿ ಆಹಾರ ಧಾನ್ಯದೊಂದಿಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ 5 ಕೆ.ಜಿ ಆಹಾರ ಧಾನ್ಯದ ಬದಲಾಗಿ ಪ್ರತಿ ಕೆ.ಜಿಗೆ ರೂ.34/-ರಂತೆ ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತಗೆ ಡಿ.ಬಿ.ಟಿ ಮೂಲಕ ರೂ.170/ರಂತೆ ಹಣವನ್ನು ವರ್ಗಾಯಿಸಲಾಗುತ್ತಿತ್ತು. ಆದರೆ ಪ್ರಸ್ತುತ ಫೆಬ್ರುವರಿ-2025ನೇ ತಿಂಗಳಿನಿಂದ ನಗದು ಬದಲಾಗಿ 5.ಕೆ.ಜಿ ಅಕ್ಕಿ ನೀಡುವ ಕುರಿತು ಸರ್ಕಾರವು ಆದೇಶ ಹೊರಡಿಸಿದೆ.

ಫೆಬ್ರುವರಿ-2025ನೇ ತಿಂಗಳ ಅನ್ನಭಾಗ್ಯ ಯೋಜನೆಯಡಿ ಪಡಿತರ ವಸ್ತುಗಳ ವಿತರಣೆ ಕಾರ್ಯವು ಮುಕ್ತಯವಾಗಿದ್ದು, ಫೆಬ್ರುವರಿ ತಿಂಗಳಲ್ಲಿ ಹಂಚಿಕೆಯಾಗಬೇಕಾಗಿದ್ದ 5 ಕೆ.ಜಿ. ಅಕ್ಕಿಯನ್ನು ಮಾರ್ಚ್ ತಿಂಗಳ ಪಡಿತರ ವಿತರಣೆಯಲ್ಲಿ ಸೇರ್ಪಡೆಗೊಳಿಸಿ ಪಡಿತರ ಹಂಚಿಕೆ ಆಗಿರುತ್ತದೆ.

ಅಂತ್ಯೋದಯ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ ಅನ್ನ ಯೋಜನೆಯ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಆದ್ಯತಾ ಕುಟುಂಬ ಪಿಎಚ್‌ಎಚ್ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮಾರ್ಚ್-2025ನೇ ತಿಂಗಳಲ್ಲಿ ಓಈಖಂ ಅಡಿ ಹಂಚಿಕೆ ಮಾಡಿರುವ ಅಕ್ಕಿ ಸೇರಿದಂತೆ ಪ್ರತಿ ಸದಸ್ಯರಿಗೆ ಒಟ್ಟು 15 ಕೆ.ಜಿ ಅಕ್ಕಿಯನ್ನು ಹಂಚಿಕೆ ಮಾಡವುದಿರುತ್ತದೆ.

ಮೇಲೆ ತಿಳಿಸಿರುವ ಅಂತ್ಯೋದಯ ಹಾಗೂ ಪಿಎಚ್‌ಎಚ್ (ಬಿಪಿಎಲ್) ಪಡಿತರ ಚೀಟಿದಾರರು ಮಾರ್ಚ್-2025ನೇ ತಿಂಗಳಲ್ಲಿ ಪ್ರತಿ ಸದಸ್ಯರಿಗೆ ಹಂಚಿಕೆಯಾದ 15 ಕೆ.ಜಿ ಅಕ್ಕಿಯನ್ನು ಸಂಬಂಧಿಸಿದ ನ್ಯಾಯಬೆಲೆ ಅಂಗಡಿಯಿಂದ ಬಯೋಮೆಟ್ರಿಕ್ ನೀಡಿ ಆಹಾರ ಧಾನ್ಯ ಪಡೆಯುವಂತೆ ಪ್ರಕಟಣೆ ಮೂಲಕ ತಿಳಿಸಲಾಗಿದೆ. ಒಂದು ವೇಳೆ ನ್ಯಾಯಬೆಲೆ ಅಂಗಡಿಯವರು ಕಡಿಮೆ ಪ್ರಮಾಣದ ಆಹಾರ ಧಾನ್ಯ ವಿತರಿಸಿದಲ್ಲಿ ನಿಶುಲ್ಕ ದೂರವಾಣಿ 1967 ಅಥವಾ ಈ ಕೆಳಕಾಣಿಸಿದಂತೆ ಸಂಬಂಧಿಸಿದ ಆಹಾರ ನಿರೀಕ್ಷಕರಿಗೆ ದೂರು ಸಲ್ಲಿಸಬಹುದಾಗಿರುತ್ತದೆ.

ಎನ್.ಆರ್. ಚಿನ್ನಪ್ಪಗೌಡರ, ಆಹಾರ ನಿರೀಕ್ಷಕರು, ಗದಗ-9008913514, ಬಿ.ಎಂ ಕರ್ನಾಚಿ, ಆಹಾರ ಶಿರಸ್ತೇದಾರರು-ಗದಗ ಗ್ರಾಮೀಣ-9916763033, ಮಂಜುಳಾ ಆಕಳದ-ಆಹಾರ ನಿರೀಕ್ಷಕರು-ಶಿರಹಟ್ಟಿ-7829960469, ಸುವರ್ಣ ಜಮ್ಮಣಕಟ್ಟಿ-ಆಹಾರ ನಿರೀಕ್ಷಕರು ರೋಣ-6364381603, ಜಗದೀಶ ಅಮಾತಿ, ಆಹಾರ ನಿರೀಕ್ಷಕರು ಮುಂಡರಗಿ-966313498, ಜಗದೀಶ ಕುರುಬರ-ಲಕ್ಷ್ಮೇಶ್ವರ-9164249118, ಎಸ್.ಪಿ. ಚವಡಿ-ಆಹಾರ ಶಿರಸ್ತೇದಾರರು-ಗಜೇಂದ್ರಗಡ-9916890282, ಅನಿಲ ಪವಾರ-ಆಹಾರ ನಿರೀಕ್ಷಕರು-ನರಗುಂದ 9606281029 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ ನೇತೃತ್ವದಲ್ಲಿ 29 ವಾಣಿಜ್ಯ ಮಳಗೆಗಳ ಬಹಿರಂಗ ಹರಾಜು ಪ್ರಕ್ರಿಯೆ

# ದಶಕದ ನಂತರ ವಾಣಿಜ್ಯ ಮಳಿಗೆ ಹರಾಜು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬಹುದಿನಗಳಿಂದ ಕುತೂಹಲ ಸೃಷ್ಟಿಸಿದ್ದ ವಾಣಿಜ್ಯ ಮಳಗೆಗಳ ಹರಾಜು ಪ್ರಕ್ರಿಯೆಗೆ ಶುಕ್ರವಾರ ಮುಕ್ತಿ ದೊರೆತಿದೆ. ಪಟ್ಟಣದ ಪಟ್ಟಣ ಪಂಚಾಯಿತಿಯ ವ್ಯಾಪ್ತಿಯಲ್ಲಿರುವ 29 ವಾಣಿಜ್ಯ ಮಳಗೆಗಳ ಬಹಿರಂಗ ಹರಾಜು ಪ್ರಕ್ರಿಯೆಯು ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ ನೇತೃತ್ವದಲ್ಲಿ ಶುಕ್ರವಾರ ಜರುಗಿದವು.

ಇಲ್ಲಿನ ಅಬ್ಬಿಗೇರಿ ರಸ್ತೆಯಲ್ಲಿರುವ 14 ವಾಣಿಜ್ಯ ಮಳಗೆಗಳ ಪೈಕಿ ಒಂದು ಎಸ್.ಸಿ., ಒಂದು ಎಸ್.ಟಿ ಮೀಸಲಾತಿ ಇದ್ದು, ಅದರಲ್ಲಿ 12 ಮಳಗೆಗಳು ಹರಾಜು ಆಗಿವೆ. ಉಳಿದ 2 ಮಳಗೆಳಿಗೆ ಒಬ್ಬರು ಮಾತ್ರ ಟೆಂಡರ್ ಅರ್ಜಿ ಹಾಕಿರುವುದರಿಂದ ಅವುಗಳನ್ನು ಉಳಿಸಿಕೊಳ್ಳಲಾಗಿದೆ. ಪಟ್ಟಣ ಪಂಚಾಯಿತಿ ಬಲಭಾಗದಲ್ಲಿರುವ ಒಟ್ಟು 5 ವಾಣಿಜ್ಯ ಮಳಗೆಗಳ ಪೈಕಿ ಒಂದು ವಿಶೇಷ ಚೇತನರಿಗೆ ಮೀಸಲಾತಿಯಿದೆ. ಇದರಲ್ಲಿ ಒಬ್ಬ ವ್ಯಕ್ತಿ ಮಾತ್ರ ಟೆಂಡರ್‌ಗೆ ಅರ್ಜಿ ಸಲ್ಲಿಸಿದ್ದು, ಇವುಗಳನ್ನು ಬಹಿರಂಗ ಹರಾಜು ಕೂಗದೆ ಉಳಿಸಿಕೊಳ್ಳಲಾಗಿದೆ. ಉಳಿದ 3 ವಾಣಿಜ್ಯ ಮಳಗೆಗಳಿಗೆ ಯಾರು ಕೂಡ



ಟೆಂಡರ್ ಪ್ರಕ್ರಿಯೆಗೆ ಭಾಗವಹಿಸಿಲ್ಲ.

ಪ.ಪಂ ಎಡಭಾಗದಲ್ಲಿರುವ 8 ವಾಣಿಜ್ಯ ಮಳಗೆಗಳ ಪೈಕಿ ಒಂದು ಮಾತ್ರ ಎಸ್.ಸಿ ಮೀಸಲಾತಿ ಇದ್ದು, 2 ಮಳಗೆಗಳು ಬಹಿರಂಗ ಹರಾಜು ಆಗಿವೆ. ಉಳಿದ 4ಕ್ಕೆ ಒಬ್ಬ ವ್ಯಕ್ತಿ ಅರ್ಜಿ ಸಲ್ಲಿಸಿದ್ದು, ಇನ್ನುಳಿದ 2 ಮಳಗೆಗಳಿಗೆ ಯಾರೂ ಅರ್ಜಿ ಜೊತೆಗೆ ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಿಲ್ಲ. ಪಟ್ಟಣದ ತೊಂಡಿಹಾಳ ರಸ್ತೆಯಲ್ಲಿರುವ 2 ವಾಣಿಜ್ಯ ಮಳಗೆಗಳ ಪೈಕಿ ಒಂದು ಎಸ್.ಸಿ, ಒಂದು ಎಸ್.ಟಿ ಮೀಸಲಾತಿ ಇದ್ದು, ಅದರಲ್ಲಿ 2 ಮಳಗೆಗಳಿಗೆ ಒಬ್ಬ ವ್ಯಕ್ತಿ ಮಾತ್ರ ಅರ್ಜಿ ಸಲ್ಲಿಸಿರುವುದರಿಂದ ಬಹಿರಂಗ ಹರಾಜು ಕೂಗದೆ ಉಳಿಸಿಕೊಂಡಿದೆ.

ಪಟ್ಟಣ ಪಂಚಾಯಿತಿಯ ಒಟ್ಟು 29 ವಾಣಿಜ್ಯ ಮಳಗೆಳ ಪೈಕಿ 14 ಬಹಿರಂಗ ಹರಾಜು ಆಗಿದ್ದು, ಅವುಗಳಲ್ಲಿ ಹೆಚ್ಚಿನ ಬಾಡಿಗೆ 10,200 ರೂ, ಮೈಲಾರಪ್ಪ ಚಳ್ಳಮರದ ಕೂಗುವ ಮೂಲಕ ವಿಶೇಷ ಗಮನ ಸೆಳೆದರು. ಎರಡನೆಯ ಹೆಚ್ಚಿನ ಬಾಡಿಗೆ 8,500 ರೂ, ಮಹಮ್ಮದ ಹೊಸಮನಿ ಕೂಗುವ ಮೂಲಕ ಗಮನ ಸೆಳೆದಿದ್ದಾರೆ. ಇನ್ನುಳಿದ 10 ವಾಣಿಜ್ಯ ಮಳಗೆಗಳು ಏಕವ್ಯಕ್ತಿ ಅರ್ಜಿ ಸಲ್ಲಿಸಿರುವುದರಿಂದ ಅವುಗಳನ್ನು ಪ.ಪಂ ಅಧ್ಯಕ್ಷ-ಉಪಾಧ್ಯಕ್ಷ, ಸ್ಥಾಯಿ ಕಮಿಟಿ ಚೇರಮನ್ ಮತ್ತು ಸರ್ವ ಸದಸ್ಯರೊಂದಿಗೆ ಈ ಕುರಿತು ಚರ್ಚಿಸಲಾಗುತ್ತದೆ. ಇನ್ನುಳಿದ 5 ವಾಣಿಜ್ಯ ಮಳಗೆಗಳಿಗೆ ಯಾರೂ ಕೂಡ ಅರ್ಜಿ ಹಾಕಿಲ್ಲವಾದ್ದರಿಂದ ಮರು ಟೆಂಡರ್ ಆಹ್ವಾನ ಮಾಡಲಾಗುತ್ತಿದೆ.

ಹರಾಜು ಸಂದರ್ಭದಲ್ಲಿ ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಕಮಿಟಿ ಚೇರಮನ ಮುತ್ತಪ್ಪ ನೂಲ್ಕಿ, ಪ.ಪಂ ಸದಸ್ಯರು ಮತ್ತು ಸಿಬ್ಬಂದಿ ಇದ್ದರು.

ಮಳಿಗೆಗಳಲ್ಲಿ ವ್ಯಾಪಾರ ನಡೆಸುತ್ತಿರುವರು ಹಾಗೂ ಹೊಸ ವ್ಯಾಪಾರಸ್ಥರು ಮಳಿಗೆಗಳನ್ನು ಪೈಪೋಟಿಯಲ್ಲಿ ಹರಾಜು ಕೂಗಿದ್ದರು. ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ಇ.ಎಂ.ಡಿ. ಠೇವಣಿ ಮೊತ್ತವನ್ನು ಸೇರಿ 1 ಲಕ್ಷ ರೂಪಾಯಿಯ ಡಿ.ಡಿ. ಸಲ್ಲಿಸಲಾಗಿತ್ತು. ಹರಾಜಿನಲ್ಲಿ ಭಾಗವಹಿಸುವವರು ಯಾವ ಮಳಿಗೆಗೆ ಹರಾಜಿನಲ್ಲಿ ಭಾಗವಹಿಸುತ್ತೇವೆ ಎಂದು ಅರ್ಜಿ ನೀಡಿದ್ದು, ಅದೇ ಮಳಿಗೆಯ ಬಿಡ್‌ನಲ್ಲಿ ಭಾಗವಹಿಸಲು ಅವಕಾಶ ನೀಡಲಾಗಿತ್ತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka